ಸಂಪುಟ : 10 ಸಂಚಿಕೆ: 50 ಪುಟ : 4+2 ಬೆಲೆ: 3.00 ರವಿವಾರ ಮಾರ್ಚ್ 23 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 50 Pages : 4+2 Price : 3.00 Sunday March 23 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25


## ಜಿಲ್ಲಾ ಕುರುಬ ಸಮಾಜದ ಸಭೆ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಪ್ರದೇಶ ಕುರುಬರ ಸಂಘದ ಸರ್ವ ಸದಸ್ಯರ ಹಾಗೂ ಸಮಾಜ ಬಾಂಧವರ ಸಭೆಯನ್ನು ಮಾರ್ಚ್ 23ರ ಬೆಳಿಗ್ಗೆ 11 ಗಂಟೆಗೆ ಗದಗ ನಗರದ ಮುಳಗುಂದ ರಸ್ತೆಯ ಶ್ರೀ ಕನಕ ಭವನದಲ್ಲಿ ಕರೆಯಲಾಗಿದೆ.

ಮೇ ತಿಂಗಳಲ್ಲಿ 25 ವರ್ಷಗಳನ್ನು ಪೂರೈಸಲಿರುವ ಗದಗ ತಾಲೂಕಾ ಕುರುಬರ ಸಂಘದ ರಜತ ಮಹೋತ್ಸವ ಆಚರಣೆ ಹಾಗೂ ಸಮಾರಂಭ ಯಶಸ್ವಿಗೊಳಿಸಲು ವಿವಿಧ ಸಮಿತಿ ರಚನೆಗಳ ಕುರಿತು ಸಭೆಯಲ್ಲಿ ಚರ್ಚಿಸಲಾಗುವುದು. ಸಮಾಜ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸಲಹೆ-ಸೂಚನೆ ನೀಡಿ ಸಭೆಯನ್ನು ಯಶಸ್ವಿಗೊಳಿಸಲು ಕರ್ನಾಟಕ ಪ್ರದೇಶ ಕುರುಬರ ಸಂಘದ ಅಧ್ಯಕ್ಷರಾದ ಫಕ್ಕೀರಪ್ಪ ಹೆಬಸೂರ ಹಾಗೂ ಪ್ರಧಾನ ಕಾರ್ಯದರ್ಶಿಗಳಾದ ಶರಣಬಸಪ್ಪ ಮುದಿಯಜ್ಜನವರ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## IPL 2025ಕ್ಕೆ ಗ್ರ್ಯಾಂಡ್ ವೆಲ್ಕಮ್: ಶಾರುಖ್ ಮಾತಿನ ಮೋಡಿಗೆ, ಮತ್ತೇರಿಸಿದ ಶ್ರೇಯಾ ಹಾಡು!



■ ವಿಜಯಸಾಕ್ಷಿ ಸುದ್ದಿ, ಕೊಲ್ಕತ್ತಾ

ಕ್ರಿಕೆಟ್ ಅಭಿಮಾನಿಗಳು ಕಾತುರದಿಂದ ಕಾಯುತ್ತಿದ್ದ IPL 2025ಕ್ಕೆ ಕೋಲ್ಕತ್ತಾದ ಈಡನ್ ಗಾರ್ಡನ್ಸ್‌ನಲ್ಲಿ ಅದ್ದೂರಿ ಸ್ವಾಗತ ಸಿಕ್ಕಿದೆ.

ಬಾಲಿವುಡ್ ಸೂಪರ್‌ಸ್ಟಾರ್ ಶಾರುಖ್ ಖಾನ್ ಅದ್ಭುತ ಭಾಷಣದೊಂದಿಗೆ ಕಾರ್ಯಕ್ರಮಕ್ಕೆ ಚಾಲನೆ ಸಿಕ್ಕಿತು. ಗಾಯಕಿ ಶ್ರೇಯಾ ಘೋಷಾಲ್ ತನ್ನ ಮಧುರ ಕಂಠದಿಂದ ಗಾಯನದ ಮೂಲಕ ಕಾರ್ಯಕ್ರಮಕ್ಕೆ ಮೆರುಗು ತಂದುಕೊಟ್ಟರು. ಶ್ರೇಯಾ ಅವರ ಮೆಲೋಡಿ ಗಾಯನಕ್ಕೆ ಫ್ಯಾನ್ಸ್ ಫಿದಾ ಆದರು.

ಶ್ರೇಯಾ ಘೋಷಾಲ್ ಅವರ ಪ್ರದರ್ಶನದ ನಂತರ ಬಾಲಿವುಡ್ ನಟಿ ದಿಶಾ ಪಟಾನಿ ಮನಮೋಹಕ ನೃತ್ಯದ ಮೂಲಕ ಗಮನ ಸೆಳೆದರು. ಬೆಳ್ಳಿ ಉಡುಪಿನಲ್ಲಿ ಕಂಗೊಳಿಸಿದ ದಿಶಾ ತಮ್ಮ ಹಾಟ್ ನೃತ್ಯದ ಮೂಲಕ ವೇದಿಕೆಯನ್ನು ರಂಗೇರಿಸಿದರು.

ಉದ್ಘಾಟನೆ ಕಾರ್ಯಕ್ರಮ ಅಚ್ಚುಕಟ್ಟಾಗಿ ನೆರವೇರಿತು.

## ಡಾ. ಮಾತೆ ಮಹಾದೇವಿಯವರ ಸ್ಮರಣೆ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಮಾ. 23ರಂದು ಬೆಳಿಗ್ಗೆ 7.30ಕ್ಕೆ ನಡೆಯಲಿರುವ ಬಸವದಳದ 1638ನೇ ಶರಣ ಸಂಗಮದಲ್ಲಿ ಸಹಜ ಶಿವಯೋಗ ಹಾಗೂ ಪೂಜ್ಯ ಡಾ. ಮಾತೆ ಮಹಾದೇವಿಯವರ 79ನೇ ಜಯಂತಿ ಮತ್ತು 6ನೇ ಸ್ಮರಣೆ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಅಧ್ಯಕ್ಷತೆಯನ್ನು ಬಸವದಳದ ಅಧ್ಯಕ್ಷ, ಶರಣ ವಿ.ಕೆ. ಕರೇಗೌಡ್ರ ವಹಿಸುವರು. ಶರಣತತ್ವ ಚಿಂತಕ ಶರಣ ಎಸ್.ಎ. ಮುಗದ ಸಹಜ ಶಿವಯೋಗ ಹಾಗೂ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಹಿರಿಯ ತರಬೇತಿ ಅಧಿಕಾರಿ ಶರಣ ಆರ್.ಎ. ಕಳ್ಳಿಮನಿ ಉಪನ್ಯಾಸ ನೀಡುವರು. ಅತಿಥಿಗಳಾಗಿ ಶರಣೆ ಶೀಲಕ್ಕ ಎನ್.ಪಟ್ಟಣಶೆಟ್ಟಿ ಪಾಲ್ಗೊಳ್ಳುವರು. ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

### ಜಿಲ್ಲಾ ಸರ್ಕಾರಿ ನೌಕರರ ಕ್ರೀಡಾಕೂಟಕ್ಕೆ ಚಾಲನೆ ನೀಡಿದ ಸಚಿವ ಎಚ್.ಕೆ. ಪಾಟೀಲ

# ಆರೋಗ್ಯಯುತ ಜೀವನಶೈಲಿ ರೂಢಿಸಿಕೊಳ್ಳಿ

■ ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರಿ ನೌಕರರು ಕ್ರೀಡಾ ಅಭಿರುಚಿ ಮೈಗೂಡಿಸಿಕೊಂಡು ಆರೋಗ್ಯಯುತ ಜೀವನಶೈಲಿಯನ್ನು ರೂಢಿಸಿಕೊಳ್ಳಿ ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಕರೆ ನೀಡಿದರು.

ಅವರು ಶನಿವಾರ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಶಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡಿದ್ದ 2024-25ನೇ ಸಾಲಿನ ಗದಗ ಜಿಲ್ಲಾ ಮಟ್ಟದ ಸರ್ಕಾರಿ ನೌಕರರ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

> ಬಿಲ್ಲುಗಾರಿಕೆ ಸೇರಿದಂತೆ ಇತರ ಕ್ರೀಡಾ ಸೌಲಭ್ಯಗಳಿಗೂ ಪ್ರೋತ್ಸಾಹ ನೀಡಲಾಗುವುದು. ಒಲಿಂಪಿಕ್ಸ್‌ನಲ್ಲಿ ಭಾಗವಹಿಸುವ ಕ್ರೀಡಾಪಟುಗಳಿಗೆ ಅಗತ್ಯವಿರುವ ಎಲ್ಲಾ ಸೌಲಭ್ಯಗಳು ನಮ್ಮ ದೇಶದಲ್ಲಿ ಇಲ್ಲ. ಆದರೆ ಇವೆಲ್ಲವುಗಳ ನಡುವೆಯೂ ನಾವು ಸಾಧನೆ ಮಾಡಬೇಕು.
>
> – ಎಚ್.ಕೆ. ಪಾಟೀಲ.
> ಜಿಲ್ಲಾ ಉಸ್ತುವಾರಿ ಸಚಿವರು.



ಕ್ರೀಡಾ ಅಭ್ಯಾಸದ ಮೂಲಕ ನೌಕರರು ಶಾರೀರಿಕ ಹಾಗೂ ಮಾನಸಿಕ ಸ್ವಾಸ್ಥ್ಯವನ್ನು ಉಳಿಸಿಕೊಳ್ಳಬಹುದಾಗಿದೆ. ಟೆನ್ನಿಸ್ ಕೋರ್ಟ್ ನಿರ್ಮಾಣ ಕಾರ್ಯಕ್ಕೆ ಚಾಲನೆ ನೀಡಲಾಗಿದ್ದು, ಮುಂದಿನ ಆರು ತಿಂಗಳಲ್ಲಿ ಪೂರ್ಣಗೊಳ್ಳಲಿದೆ. 2025ರಲ್ಲಿ ಜಿಲ್ಲೆಯ ಕ್ರೀಡಾ ಸೌಲಭ್ಯಗಳ ಬೌದ್ಧಿಕ ವಿಕಸನಕ್ಕೆ ಹೆಚ್ಚಿನ ಪ್ರೋತ್ಸಾಹ ನೀಡಲಾಗುವುದು ಎಂದು ಸಚಿವ ಎಚ್.ಕೆ. ಪಾಟೀಲ ಹೇಳಿದರು.

ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ಸರ್ಕಾರಿ ನೌಕರರು ದಿನನಿತ್ಯದ ಕೆಲಸದ ಒತ್ತಡವನ್ನು ಸಮರ್ಪಕವಾಗಿ ನಿರ್ವಹಿಸಲು ಕ್ರೀಡಾ ಚಟುವಟಿಕೆಗಳು ಅವಶ್ಯಕ. ಆರೋಗ್ಯ ಕಾಪಾಡಿಕೊಳ್ಳಲು ಪ್ರತಿದಿನ ಮೆಲುನಡಿಗೆ, ಧ್ಯಾನ ಮತ್ತು ಯೋಗದ ಅಭ್ಯಾಸ ಮಾಡಬೇಕು. ಇದರಿಂದ ಒತ್ತಡ ನಿವಾರಣೆ ಹಾಗೂ ಕೆಲಸದ ಕಾರ್ಯಕ್ಷಮತೆ ಹೆಚ್ಚಲು ಸಹಾಯವಾಗುತ್ತದೆ ಎಂದು ಸಲಹೆ ನೀಡಿದರು.

> ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯ ಹಿರಿಯ ಉಪಾಧ್ಯಕ್ಷ ಹಾಗೂ ಜಿಲ್ಲಾ ಅಧ್ಯಕ್ಷರಾದ ಡಾ. ರವಿ ಗುಂಜೀಕರ ಮಾತನಾಡಿ, ಹಿಂದಿನ ಕ್ರೀಡಾಕೂಟದಲ್ಲಿ ನಮ್ಮ ಜಿಲ್ಲೆಯ ನೌಕರರು ರಾಜ್ಯ ಹಾಗೂ ರಾಷ್ಟ್ರೀಯ ಮಟ್ಟದಲ್ಲಿ ಅತ್ಯುತ್ತಮ ಪ್ರದರ್ಶನ ನೀಡಿ ಕೀರ್ತಿ ತಂದಿದ್ದಾರೆ. ಈ ವರ್ಷವೂ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ನಮ್ಮ ಜಿಲ್ಲೆಗೆ ಕೀರ್ತಿ ತರುವಂತೆ ಪ್ರೇರೇಪಿಸೋಣ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಗ್ಯಾರಂಟಿ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ರಾಜ್ಯ ಪರಿಷತ್ ಸದಸ್ಯ ಡಿ.ಟಿ. ವಾಲ್ಮೀಕಿ, ಜಿಲ್ಲಾ ಖಜಾಂಜಿ ಎಂ.ಎಂ. ನಿಟ್ಟಾಲಿ, ಜಿಲ್ಲಾ ಕಾರ್ಯದರ್ಶಿ ಡಾ. ಬಸವರಾಜ ಬಳ್ಳಾರಿ, ಗೌರವಾಧ್ಯಕ್ಷ ಡಿ.ಎಸ್. ತಳವಾರ, ಕಾರ್ಯಾಧ್ಯಕ್ಷ ಸಿದ್ದಪ್ಪ ಲಿಂಗದಾಳ, ಹಿರಿಯ ಉಪಾಧ್ಯಕ್ಷ ಮಾರುತಿ ಮಂಗಳಾಪೂರ ಸೇರಿದಂತೆ ಹಲವು ಗಣ್ಯರು ಭಾಗವಹಿಸಿದ್ದರು.

ಕಳೆದ ವರ್ಷ ಉತ್ತಮ ಸಾಧನೆ ಮಾಡಿದ ಕ್ರೀಡಾಪಟುಗಳನ್ನು ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಸನ್ಮಾನಿಸಿ, ಅವರ ಸಾಧನೆಯನ್ನು ಶ್ಲಾಘಿಸಿದರು. ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಶರಣು ಗೋಗೇರಿ ಸ್ವಾಗತಿಸಿದರು.

### ಗದಗ ಜಿಲ್ಲೆಗೆ ತಟ್ಟದ ಬಂದ್ ಬಿಸಿ । ಸಹಜ ಸ್ಥಿತಿಯಲ್ಲಿ ಜನತೆ । ಕರವೇ ಕಾರ್ಯಕರ್ತರಿಂದ ರಸ್ತೆ ತಡೆ

# ಕನ್ನಡಿಗರ ಮೇಲಿನ ದೌರ್ಜನ್ಯ ಕೊನೆಗೊಳ್ಳಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಬೆಳಗಾವಿಯಲ್ಲಿ ಮರಾಠಿ ಪುಂಡರ ಹಾವಳಿಯನ್ನು ಖಂಡಿಸಿ ಕನ್ನಡಪರ ಸಂಘಟನೆಗಳು ಶನಿವಾರ ಕರೆ ನೀಡಿದ್ದ ಕರ್ನಾಟಕ ಬಂದ್‌ಗೆ ಕರ್ನಾಟಕದ ಹಲವು ಜಿಲ್ಲೆಗಳಲ್ಲಿ ನೀರಸ ಪ್ರತಿಕ್ರಿಯೆ ವ್ಯಕ್ತವಾಗಿದ್ದು, ಗದಗ ಜಿಲ್ಲೆಯಲ್ಲೂ ಜನಜೀವನ ಸಹಜ ಸ್ಥಿತಿಯಲ್ಲಿತ್ತು. ಇಲ್ಲಿನ ಪಂಡಿತ ಪುಟ್ಟರಾಜ ಗವಾಯಿಗಳ ಬಸ್ ನಿಲ್ದಾಣದಲ್ಲಿಯೂ ಎಂದಿನಂತೆ ಜನ ಸಂಚಾರವಿದ್ದು, ಆಟೋ, ಬೈಕ್, ಸಾರಿಗೆ, ಖಾಸಗಿ ಬಸ್‌ಗಳ ಓಡಾಟ ಎಂದಿನಂತೆ ಇತ್ತು. ಬೆಳಿಗ್ಗೆಯಿಂದಲೇ ಜನರ ಓಡಾಟ, ಹೂ, ಹಣ್ಣು, ಹಾಲು ಮಾರಾಟ ಯಥಾಸ್ಥಿತಿಯಲ್ಲಿದ್ದು, ಸಂಜೆಯವರೆಗೂ ಬಂದ್ ಬಿಸಿ ತಟ್ಟಲಿಲ್ಲ.

ಈ ನಡುವೆ, ಕರ್ನಾಟಕ ಬಂದ್ ನಿಮಿತ್ತ ನಗರದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ (ಹೆಚ್.ಶಿವರಾಮೇಗೌಡ್ರ ಬಣ) ಗದಗ ಜಿಲ್ಲಾ ಘಟಕದಿಂದ ನಗರದಲ್ಲಿ ಬೈಕ್ ರ‍್ಯಾಲಿ ನಡೆಸಿ, ಘೋಷಣೆ ಕೂಗುತ್ತ, ಮಹಾತ್ಮ ಗಾಂಧಿ ವೃತ್ತದಲ್ಲಿ ರಸ್ತೆ ತಡೆ ನಡೆಸಿ ಪ್ರತಿಭಟನೆ ಕೈಗೊಂಡರು.

ಈ ಸಂದರ್ಭದಲ್ಲಿ ಕರವೇ ಗದಗ ಜಿಲ್ಲಾಧ್ಯಕ್ಷ ಮಂಜುನಾಥ ಪಿ.ಪರ್ವತಗೌಡ್ರ ಮಾತನಾಡಿ, ಎಮ್.ಇ.ಎಸ್ ಪುಂಡರಿಂದ ಬೆಳಗಾವಿಯಲ್ಲಿ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ನಿರ್ವಾಹಕನ ಮೇಲೆ ನಡೆದ ದೌರ್ಜನ್ಯ ಮತ್ತು ಮಹಾರಾಷ್ಟ್ರ ರಾಜ್ಯದಲ್ಲಿ ನಮ್ಮ ರಾಜ್ಯದ ರಸ್ತೆ ಸಾರಿಗೆ ಸಂಸ್ಥೆಯ ಚಾಲಕ ಮತ್ತು ನಿರ್ವಾಹಕರ ಮೇಲೆ ನಡೆಸಿದ ಗೂಂಡಾ ವರ್ತನೆಯನ್ನು ಸಹಿಸಲಾಗದು. ಪದೇ ಪದೇ ಕನ್ನಡಿಗರ ಮೇಲೆ ಆಗುತ್ತಿರುವ ದೌರ್ಜನ್ಯ, ಅನ್ಯಾಯವನ್ನು ರಾಜ್ಯ ಸರಕಾರ ಗಂಭೀರವಾಗಿ ಪರಿಗಣಿಸಿ ಎಮ್.ಇ.ಎಸ್ ಮೇಲೆ ನಿಷೇಧ ಹೇರಬೇಕು ಎಂದು ಆಗ್ರಹಿಸಿದರು.



> ರೈಲ್ವೆ ಇಲಾಖೆ, ಬ್ಯಾಂಕುಗಳು ಸೇರಿದಂತೆ ಕೇಂದ್ರ ಸರಕಾರದ ಇಲಾಖೆಗಳಲ್ಲಿ ಕನ್ನಡಿಗರ ಮೇಲೆ ನಿರಂತರವಾಗಿ ಆಗುತ್ತಿರುವ ಮಲತಾಯಿ ಧೋರಣೆಯನ್ನು ತೀವ್ರವಾಗಿ ಖಂಡಿಸುವದರೊಂದಿಗೆ ರಾಜ್ಯ ಸರಕಾರ ಇಂತಹ ನಾಡದ್ರೋಹಿಗಳ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕ್ರಮ ವಹಿಸಬೇಕು ಎಂದು ಕರವೇ ಕಾರ್ಯಕರ್ತರು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಕರವೇ ಗದಗ ಜಿಲ್ಲಾ ಪ್ರದಾನ ಕಾರ್ಯದರ್ಶಿ ಬಸವರಾಜ ಮುಳ್ಳಾಳ, ಜಿಲ್ಲಾ ಗೌರವಾಧ್ಯಕ್ಷ ಮಲ್ಲಿಕಾರ್ಜುನ ಕಿರೇಸೂರ, ಜಿಲ್ಲಾ ಸಂಚಾಲಕರಾದ ಪರಶುರಾಮ ಬನ್ನೂರ, ಸಂಜೀವಗೌಡ ಬೆನಹಾಳ, ಮುತ್ತು ಬಿಳೆಯಲಿ, ಶರಣಪ್ಪ ಪೂಜಾರ, ಶರಣಪ್ಪ ಮಣ್ಣೂರ ಸೇರಿದಂತೆ ಕಾರ್ಯಕರ್ತರು ಉಪಸ್ಥಿತರಿದ್ದರು.



## ಕರ್ನಾಟಕ ಬಂದ್‌ಗೆ ನೀರಸ ಪ್ರತಿಕ್ರಿಯೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಬೆಳಗಾವಿಯಲ್ಲಿ ಕನ್ನಡಿಗರ ಮೇಲೆ ಮರಾಠಿಗರ ಪುಂಡಾಟಿಕೆ ಖಂಡಿಸಿ ಮತ್ತು ಎಂಇಎಸ್ ನಿಷೇಧಕ್ಕೆ ಆಗ್ರಹಿಸಿ ವಾಟಾಳ ನಾಗರಾಜ ಮತ್ತು ವಿವಿಧ ಕನ್ನಡಪರ ಸಂಘಟನೆಗಳು ಶನಿವಾರ ಕರೆನೀಡಿದ್ದ ಕರ್ನಾಟಕ ಬಂದ್‌ಗೆ ಪಟ್ಟಣದಲ್ಲಿ ಯಾವುದೇ ಪ್ರತಿಕ್ರಿಯೆ ಕಂಡು ಬರದೇ ಎಂದಿನಂತೆ ವ್ಯಾಪಾರ-ವಹಿವಾಟು, ಜನಜೀವನ ಕಂಡು ಬಂದಿತು.



ಪಟ್ಟಣದ ಬಸ್‌ನಿಲ್ದಾಣ, ಮಾರುಕಟ್ಟೆ ಪ್ರದೇಶ, ಪಂಪ ವೃತ್ತ, ದರ್ಗಾ ರಸ್ತೆ ಹಾಗೂ ತಾಲೂಕಿನ ಪ್ರಮುಖ ಗ್ರಾಮಗಳಲ್ಲಿ, ಪ್ರಮುಖ ರಸ್ತೆಗಳಲ್ಲಿ ಶನಿವಾರ ಅಂಗಡಿ ಮುಂಗಟ್ಟುಗಳಲ್ಲಿ ಎಂದಿನಂತೆಯೇ ವ್ಯಾಪಾರ ವಹಿವಾಟು ನಡೆದಿತ್ತು. ಶಾಲಾ-ಕಾಲೇಜುಗಳ ರಜೆ-ಯ ಬಗ್ಗೆ ಯಾವುದೇ ಘೋಷಣೆಯಿಲ್ಲದ್ದರಿಂದ ಮಕ್ಕಳು ಶನಿವಾರ ಮುಂಜಾನೆಯ ವೇಳೆ ಶಾಲೆಗೆ ಹೋಗಿ ಬಂದರು. ಬಸ್, ಆಟೋ, ಹೊಟೇಲ್‌ಗಳು ಬಂದ್‌ಗೂ ನಮಗೂ ಯಾವುದೇ ಸಂಬಂಧ ಇಲ್ಲ ಎಂಬಂತೆ ಸಂಚರಿಸಿದವು. ಜನಸಾಮಾನನ್ಯರಿಗೆ ಈ ಬಗ್ಗೆ ಕಿಂಚಿತ್ತೂ ಮಾಹಿತಿ ಇಲ್ಲದ್ದರಿಂದ ಕರ್ನಾಟಕ ಬಂದ್‌ಗೆ ಸಂಬಂಧಿಸಿ ಲಕ್ಷ್ಮೇಶ್ವರದ ಜನಜೀವನ ಸಾಮಾನ್ಯವಾಗಿಯೇ ಇತ್ತು.

ಈ ಕುರಿತು ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನೆಯ ಗದಗ ಜಿಲ್ಲಾಧ್ಯಕ್ಷ ಶರಣು ಗೋಡಿ ಅವರನ್ನು ಸಂಪರ್ಕಿಸಲಾಗಿ, ಕರ್ನಾಟಕದಲ್ಲಿ ಎಂಇಎಸ್ ನಿಷೇಧ ಮತ್ತು ಪುಂಡಾಟಿಕೆಯ ವಿರುದ್ಧ ಹೋರಾಟ ನಿರಂತರ. ಹಿರಿಯ ಹೋರಾಟಗಾರಾದ ವಾಟಾಳ ನಾಗರಾಜ ಅವರ ಕನ್ನಡಪರ ಹೋರಾಟ ಶ್ಲಾಘನೀಯ. ಈಗಾಗಲೇ ಎಂಇಎಸ್ ಸಂಘಟನೆಯನ್ನು ರಾಜಕೀಯವಾಗಿ ಮೂಲೆಗುಂಪಾಗಿಸಲಾಗಿದೆ. ಕಾನೂನಾತ್ಮಕ ಹೋರಾಟ ನಿರಂತರವಾಗಿರಲಿದೆ. ಸರ್ಕಾರವೂ ಈ ಬಗ್ಗೆ ಸ್ಪಂದಿಸಿದ್ದು, ಕರ್ನಾಟಕ ಬಂದ್‌ಗೆ ಮಾತ್ರ ಬೆಂಬಲವಿರಲಿಲ್ಲ ಎಂದರು.

### ಶ್ರೀ ಮೈಲಾರ ಲಿಂಗೇಶ್ವರ ದೇವಸ್ಥಾನ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಶ್ರೀ ಜ.ನಿರಂಜನಾನಂದಪುರಿ ಸ್ವಾಮೀಜಿ ಅಭಿಮತ

# ದೇವರ ಹೆಸರಿನಲ್ಲಿ ಮೌಢ್ಯಗಳಿಗೆ ಬಲಿಯಾಗದಿರಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ದೇವಸ್ಥಾನಗಳು ನಮ್ಮ ಸಂಸ್ಕೃತಿಯ ಪ್ರತೀಕವಾಗಿದ್ದು, ಜನರಲ್ಲಿ ಧಾರ್ಮಿಕ ಭಾವನೆ, ಭಯ-ಭಕ್ತಿ ಮೂಡಿಸಿ ಸನ್ಮಾರ್ಗದತ್ತ ಕೊಂಡ್ಯುಯುವ ಶೃದ್ಧಾ ಮತ್ತು ಶಕ್ತಿ ಕೇಂದ್ರಗಳಾಗಿವೆ. ಜನತೆ ದೇವರ ಹೆಸರಿನಲ್ಲಿ ಮೌಢ್ಯಗಳಿಗೆ ಬಲಿಯಗದೇ ಶೈಕ್ಷಣಿಕ, ವೈಜ್ಞಾನಿಕ ಜ್ಞಾನ ಹೊಂದಬೇಕು ಎಂದು ಕಾಗಿನೆಲೆ ಕನಕಗುರುಪೀಠದ ಜ.ನಿರಂಜನಾನಂದಪುರಿ ಸ್ವಾಮೀಜಿ ಹೇಳಿದರು.

ಅವರು ಶನಿವಾರ ತಾಲೂಕಿನ ಬಾಲೆಹೊಸೂರ ಗ್ರಾಮದಲ್ಲಿ ನಿರ್ಮಾಣಗೊಂಡ ಶ್ರೀ ಮೈಲಾರ ಲಿಂಗೇಶ್ವರ ದೇವಸ್ಥಾನ ಮತ್ತು ಶಿಖಾರ ಉದ್ಘಾಟನೆ, ದುರ್ಗಾದೇವಿ ದೇವಸ್ಥಾನದ 48ನೇ ದಿನದ ಮಹಾಮಂಡಲ ಪೂಜಾ ಕಾರ್ಯಕ್ರಮ ಹಾಗೂ ತುಲಾಬಾರ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.



ಮನುಷ್ಯನ ಬದುಕು ಮೌಲ್ಯಯುತ ಮತ್ತು ಸ್ಮರಣೀಯವಾಗಿರಲು ಧರ್ಮದ ತಳಹದಿಯಲ್ಲಿ ಸಾಗಬೇಕು. ನಮ್ಮ ನಾಡಿನ ಸಂಸ್ಕೃತಿ, ಪರಂಪರೆ, ಆಚರಣೆ, ಪದ್ಧತಿಗಳು ಮುಂದುವರೆಯಬೇಕು. ಶಿಕ್ಷಣದಿಂದ ಮಾತ್ರ ದೇಶದ ಅಭಿವೃದ್ಧಿ ಸಾಧ್ಯ ಎಂಬ ಸತ್ಯವನ್ನರಿತ ಸರಕಾರಗಳು ಮುಖ್ಯವಾಗಿ ಹಿಂದುಳಿದ, ದಲಿತ ಮಕ್ಕಳ ಶಿಕ್ಷಣಕ್ಕಾಗಿ ಸಾಕಷ್ಟು ಅನುಕೂಲಗಳನ್ನು ಕಲ್ಪಿಸಿವೆ. ಪ್ರತಿಯೊಬ್ಬರೂ ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ, ಸ್ವಾವಲಂಬಿ ಬದುಕಿಗೆ ಕೌಶಲ್ಯ ಜ್ಞಾನ ಕೊಡುವ ಮೂಲಕ ದೇಶದ ಸತ್ಪ್ರಜೆಗಳನ್ನಾಗಿಸಬೇಕು ಮತ್ತು ಆ ಮೂಲಕ ಹಿಂದುಳಿದ ಎಲ್ಲ ಸಮಾಜಗಳು ಮೇಲ್ಪಂಕ್ತಿಗೆ ಬರಬೇಕು ಎಂದರು.

> ದೇವಸ್ಥಾನಗಳಲ್ಲಿ ನಿತ್ಯ ಭಜನೆ, ಆಚರಣೆಗಳು, ಸಾಂಪ್ರದಾಯಿಕ ಕಾರ್ಯಕ್ರಮಗಳು, ಕಲೆ ಮತ್ತು ಸಂಸ್ಕೃತಿಕ ಕಾರ್ಯಕ್ರಮಗಳು ಜರುಗುತ್ತಾ ಬಂದಿವೆ. ದೇವಸ್ಥಾನಗಳು ನಮ್ಮ ಧರ್ಮ, ಸಂಸ್ಕೃತಿ, ನಂಬಿಕೆ, ಭಕ್ತಿಯ ಪ್ರತೀಕವಾಗಿದ್ದು, ದೇವಸ್ಥಾನ ನಿರ್ಮಿಸುವ ಜವಾಬ್ದಾರಿಯೊಂದಿಗೆ ಇಲ್ಲಿ ನಿತ್ಯನಿರಂತರ ಶ್ರೇಷ್ಠ ಕಾರ್ಯ, ಪೂಜೆ, ಪ್ರಾರ್ಥನೆ, ಪಾವಿತ್ರ್ಯತೆ ಕಾಪಾಡುವಂತಾಗಬೇಕು ಎಂದು ಬಸಣ್ಣ ಬೆಟಗೇರಿ ಹೇಳಿದರು.

ಹಿರಿಯರಾದ ಬಸಣ್ಣ ಬೆಟಗೇರಿ ಮಾತನಾಡಿ, ಗ್ರಾಮದ ಯುವಕರೆಲ್ಲರ ಸಂಘಟಿತ ಪರಿಶ್ರಮದ ಫಲವಾಗಿ ನಿರ್ಮಾಣವಾಗಿರುವ ದೇವಸ್ಥಾನ ಸಮಾಜಮುಖಿ ಕಾರ್ಯಗಳಿಗೆ ಬಳಕೆಯಾಗಲಿ. ಯುವಕರು ದುಶ್ಚಟಗಳಿಂದ ದೂರವಿದ್ದು ಸಂಸ್ಕಾರ, ಸಂಸ್ಕೃತಿ, ಗುರು-ಹಿರಿಯರಿಗೆ ವಿಧೇಯರಾಗಿ ನಡೆಯಬೇಕು ಎಂದರು.

ಈ ವೇಳೆ ಬಸಣ್ಣ ಬೆಟಗೇರಿ, ಶೇಖಣ್ಣ ಕಾಳೆ, ಚೆನ್ನವ್ವ ಮೈಲಾರಿ, ಸಿದ್ದಪ್ಪ ನೆನಗನಹಳ್ಳಿ, ವಿರೂಪಾಕ್ಷಪ್ಪ ಮರಳಿಹಳ್ಳಿ, ನೀಲಪ್ಪ ಮಾಯಕೊಂಡ, ಪಕ್ಕೀರಯ್ಯ ಹಿರೇಮಠ, ಬಸವರಾಜ ಗುಳಣ್ಣನವರ, ಹುವುಪ್ಪ ದೀಪಾವಳಿ, ದೇವಪ್ಪ ಬಡಿಗೇರ, ಜುಂಜಪ್ಪ ಮುದಿಯಮ್ಮನವರ, ದೇವಪ್ಪ ಮತ್ತೂರ, ನಾಗಯ್ಯ ಮಠಪತಿ, ಬಸವರಡ್ಡಿ ಹನುಮರಡ್ಡಿ, ಯಲ್ಲಪ್ಪ ಸುರಣಗಿ, ಮಂತೇಶ ಈರಗಾರ, ಮಾರುತಿ ಕೊಳಲ, ಮಲ್ಲಪ್ಪ ಪುಟ್ಟಮ್ಮನವರ, ನರೇದ್ರಪ್ಪ ಜಾಲವಡಗಿ, ಶಿವಪುತ್ರಪ್ಪ ಮಾಯಕೊಂಡ, ದುರಗಪ್ಪ ಹುಲ್ಲೂರ, ನಿಂಗಪ್ಪ ಸಾಂದ್ಲಿ, ಹನುಮಂತ ಸತ್ಯಮ್ಮನವರ, ಸಂಜೀವ ಸಾಲಿ, ಕರಿಯಪ್ಪ ಸಾಂದ್ಲಿ ಮುಂತಾದವರಿದದ್ದರು.

ಸಿದ್ದಲಿಂಗಸ್ವಾಮಿ ಪಶುಪತಿಮಠ, ಮಾರುತಿ ಸತ್ಯಮ್ಮನವರ ನಿರೂಪಿಸಿದರು.

## ಸಂಪಾದಕೀಯ

# ಪ್ರಾದೇಶಿಕ ಭಾಷೆಗಳಲ್ಲೇ ಪತ್ರ ವ್ಯವಹಾರ; ಸ್ವಾಗತಾರ್ಹ ನಿರ್ಣಯ

ಕೇಂದ್ರ ಸರ್ಕಾರ ಬಲವಂತದ ಹಿಂದಿ ಹೇರಿಕೆ ಚರ್ಚೆ ಜೋರಾಗಿರುವ ಸಂದರ್ಭದಲ್ಲಿ, ರಾಜ್ಯಸಭೆಯಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಷಾ, ಬರುವ ಡಿಸೆಂಬರ್‌ನಿಂದ ದಕ್ಷಿಣದ ರಾಜ್ಯಗಳ ಭಾಷೆಯಲ್ಲೇ ಆಯಾ ಸರ್ಕಾರದ ಜೊತೆ ಪತ್ರ ವ್ಯವಹಾರ ನಡೆಸುವುದಾಗಿ ಹೇಳಿರುವುದು ಪ್ರಾದೇಶಿಕ ಭಾಷೆಗಳ ಬಲವರ್ಧನೆಗೆ ಪೂರಕವಾಗಲಿದೆ.

ಕರ್ನಾಟಕದ ಜೊತೆ ಕನ್ನಡದಲ್ಲಿ ಮತ್ತು ತಮಿಳುನಾಡು ಸರ್ಕಾರದ ಜೊತೆ ತಮಿಳು ಭಾಷೆಯಲ್ಲಿ ಪತ್ರ ವ್ಯವಹಾರ ನಡೆಸುವದಾಗಿ ಭರವಸೆ ನೀಡಿದ ಅಮಿತ್ ಶಾ, ಭಾಷೆಯ ಹೆಸರಿನಲ್ಲಿ ವೈಶಮ್ಯ ಹರಡುವವರೆಗೆ ತಕ್ಕ ಉತ್ತರ ನೀಡುವುದಾಗಿ ಸ್ಪಷ್ಟನೆ ನೀಡಿದ್ದಾರೆ.

ಇದಲ್ಲದರ ಮಧ್ಯೆಯೂ ಕೂಡ ಹಿಂದಿಯನ್ನ ವಿರೋಧಿಸುವ ಮನಸ್ಥಿತಿಯನ್ನು ಸೂಕ್ಷ್ಮವಾಗಿ ಟೀಕಿಸಿರುವ ಅಮಿತ್ ಶಾ, ಸಾವಿರಾರು ಕಿಲೋಮೀಟರ್ ದೂರದ ದೇಶದ ಭಾಷೆಯನ್ನ ಕಲಿಯುವ ಆಸಕ್ತಿ ವ್ಯಕ್ತಪಡಿಸುತ್ತೇವೆ. ಆದರೆ ನಮ್ಮದೇ ಭಾಷೆಯನ್ನ ಕಲಿಯುವುದಕ್ಕೆ ವಿರೋಧ ವ್ಯಕ್ತಪಡಿಸುತ್ತಾರೆ ಎನ್ನುವ ಮೂಲಕ, ಹಿಂದಿ ಭಾಷೆಯನ್ನ ಒಪ್ಪಿಕೊಳ್ಳದವರಿಗೆ ಸಣ್ಣ ತಿರುಗೇಟು ನೀಡಿದ್ದಾರೆ.

ಅದೇನೆ ಇರಲಿ, ಕೇಂದ್ರ ಸರ್ಕಾರ ಒಕ್ಕೂಟ ವ್ಯವಸ್ಥೆಯ ಭಾಗವಾಗಿರುವ ದಕ್ಷಿಣ ಭಾರತದ ರಾಜ್ಯಗಳ ಜೊತೆಗೆ ಆಯಾ ರಾಜ್ಯದ ಭಾಷೆಯಲ್ಲೆ ಸಂವಹನ ನಡೆಸುವಲು ಮುಂದಾಗಿರುವುದು ಒಳ್ಳೆಯ ಬೆಳವಣಿಗೆ. ಅದರ ಜೊತೆಗೆ, ರಾಜ್ಯ ಸರ್ಕಾರ ಇನ್ನು ಮುಂದಾದರು ಕರ್ನಾಟಕದಲ್ಲಿ ಕನ್ನಡವೇ ಕಡ್ಡಾಯವಾಗಿ ಆಡಳಿತ ಭಾಷೆಯಾಗುವಂತೆ ನಿರ್ಣಯ ಕೈಗೊಳ್ಳುವ ಜೊತೆಗೆ, ಅನುಷ್ಠಾನಕ್ಕೆ ಆದ್ಯತೆ ನೀಡುವಂತಾದರೆ ಕನ್ನಡಕ್ಕೆ ಒತ್ತು ಕೊಟ್ಟಂತಾಗಲಿದೆ.

## 400 ಮಂದಿಗೆ ಹನಿಟ್ರ್ಯಾಪ್: ಸತೀಶ್ ಜಾರಕಿಹೊಳಿ!

■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ

ಬರೋಬ್ಬರಿ 400 ಮಂದಿಗೆ ಹನಿಟ್ರ್ಯಾಪ್ ನಡೆದಿದೆ ಎಂದು ಹೇಳುವ ಮೂಲಕ ಸತೀಶ್ ಜಾರಕಿಹೊಳಿ ಸ್ಫೋಟಕ ವಿಚಾರ ಬಾಯಿಬಿಟ್ಟಿದ್ದಾರೆ. ಈ ಸಂಬಂಧ ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದ ಸಚಿವ ಸತೀಶ್ ಜಾರಕಿಹೊಳಿ, ರಾಜ್ಯದಲ್ಲಿ ಕೇವಲ 38 ನಾಯಕರ ಹನಿಟ್ರ್ಯಾಪ್ ಅಲ್ಲ, ಬರೋಬ್ಬರಿ 400 ಮಂದಿಗೆ ಹನಿ ಗ್ಯಾಂಗ್ ಬಲೆಗೆ ಸಿಲುಕಿಸಿದೆ.

### ಗಂಡಸರು ತಮ್ಮ ಪತ್ನಿಯ ಮೇಲೆ ಚಲಾಯಿಸುವ ಅಧಿಕಾರ ಸಾಧುವಾದುದೇ?

# ಪತ್ನಿಯನ್ನು ಹೀಗಳೆಯುವ ಮುನ್ನ...

ಆಕೆಯ ಸಣ್ಣ ಪುಟ್ಟ ತಪ್ಪುಗಳನ್ನು ಎತ್ತಿ ಆಡುವ ನೀವು ವಾದಗಳಲ್ಲಿ ಗೆಲ್ಲಬಹುದು ಆದರೆ ಪ್ರತಿ ಬಾರಿಯೂ ನಿಮ್ಮ ಪತ್ನಿ ಸೋಲಲೇಬೇಕು ಎಂದು ನೀವು ಬಯಸುವುದಾದರೆ ಮದುವೆಯ ಗಟ್ಟಿಯಾದ ಬಂಧನವಾಗಿ ನಿಮ್ಮಿಬ್ಬರ ಸಂಬಂಧವು ಉಳಿಯುವುದಿಲ್ಲ. ಆಕೆಗೆ ಓರ್ವ ನ್ಯಾಯ ನಿರ್ಣಾಯಕನು ಬೇಕಾಗಿಲ್ಲ. ಆಕೆಗೆ ಬೇಕಾಗಿರುವುದು ಆಕೆಯ ಮಾತನ್ನು ಕೇಳುವ, ಆಕೆಯ ಮನದ ತಾಕಲಾಟಗಳನ್ನು ಆಕೆ ಹೇಳದೆಯೂ ಅರಿಯುವ ಸಂಗಾತಿ.

ಎಷ್ಟೋ ಕುಟುಂಬಗಳಲ್ಲಿ ನಾವು ನೋಡಿದಂತೆ ಗಂಡಸರು ಹೆಂಗಸರ ಮೇಲೆ ದಬ್ಬಾಳಿಕೆ ಮಾಡುತ್ತಾರೆ. ಅದರಲ್ಲೂ ಗಂಡಂದಿರು ತಮ್ಮ ಹೆಂಡತಿಯರ ಮೇಲೆ ತೋರುವ ದರ್ಪ ಯಾವುದೇ ಒಬ್ಬ ಮೇಲಧಿಕಾರಿಗಿಂತ ಕಡಿಮೆ ಇರುವುದಿಲ್ಲ. ಕುಳಿತಲ್ಲಿಯೇ ಕುಡಿಯಲು ನೀರು ತಂದು ಕೊಡುವುದರಿಂದ ಹಿಡಿದು ಅವರು ಸ್ನಾನಕ್ಕೆ ಹೋದರೆ ಬಿಸಿ ನೀರನ್ನು ಸಿದ್ಧವಾಗಿಟ್ಟು ಅವರ ಒಳಉಡುಪು, ಟವೆಲ್‌ನ್ನು ತಂದು ಇಡಬೇಕು. ಅವರು ಬಯಸಿದರೆ ಬೆನ್ನಿಗೆ ಸೋಪು ಹಚ್ಚಿ ಉಜ್ಜಿ ನೀರು ಹಾಕಬೇಕು. ಅವರು ಹೊರಗೆ ಬರುವುದರೊಳಗೆ ಅವರಿಗೆ ಸ್ವಚ್ಛವಾದ ಒಗೆದು ಇಸ್ತ್ರೀ ಮಾಡಿದ ಉಡುಪುಗಳನ್ನು ಕೈಗೆ ಕೊಡಬೇಕು.

ನಂತರ ಅವರು ತಿಂಡಿಗೆ ಬರುವುದರೊಳಗಾಗಿ ಬಿಸಿಬಿಸಿಯಾದ ತಿಂಡಿಯನ್ನು ಅವರಿರುವ ಜಾಗಕ್ಕೆ ಒಯ್ದು ಕೊಟ್ಟು ನೀರಿಡಬೇಕು. ಇದೇ ರೀತಿ ದಿನದ 24 ಗಂಟೆಯೂ ಅವರ ಚಾಕರಿ ಮಾಡುವುದರಲ್ಲಿ ಎಷ್ಟೋ ಹೆಣ್ಣು ಮಕ್ಕಳು ತಮ್ಮ ಬದುಕನ್ನು ಸವೆಸಿಬಿಡುತ್ತಾರೆ. ಗಂಡ ಹೆಂಡತಿಯರು ಪರಸ್ಪರರ ಮೇಲೆ ಅವಲಂಬನೆ ಹೊಂದಿದ್ದು ಸ್ವ ಇಚ್ಛೆಯಿಂದ ಇದನ್ನೆಲ್ಲಾ ಮಾಡುವುದು ತಪ್ಪಲ್ಲ. ಅದು ಅವರವರ ಪ್ರೀತಿ, ಹೊಂದಾಣಿಕೆ ಎಂದು ಸುಮ್ಮನಾಗಿಬಿಡಬಹುದು. ಅನಾದಿಕಾಲದಿಂದಲೂ ಹೀಗೆಯೇ ನಡೆದು ಬಂದಿದೆ, ನಿಜ...ಆದರೆ ಮಾಡಿಸಿಕೊಳ್ಳುವ ವ್ಯಕ್ತಿ ಯಜಮಾನ ಎಂದು ಭಾವಿಸಿಕೊಂಡರೆ ಮಾಡುವ ವ್ಯಕ್ತಿ ಏನಾಗಬಹುದು? ಖಂಡಿತವಾಗಿಯೂ ಸೇವಕ ಅಲ್ಲವೇ!

ಅಡುಗೆ ಮನೆ ಕೆಲಸ ಹೆಂಗಸರ ಪಾರುಪತ್ಯ ಎಂಬುದು ಅನಾದಿಕಾಲದಿಂದ ಸಾಬೀತಾಗಿದ್ದರೂ ಕೂಡ ಬದಲಾದ ಕಾಲಘಟ್ಟದಲ್ಲಿ ಗಂಡಸರು ಕೂಡ ತಮ್ಮ ಅಸ್ತಿತ್ವದ ಉಳಿಯುವಿಕೆಗಾಗಿ ಗೃಹ ಕೃತ್ಯಗಳನ್ನು ಕಲಿಯಬೇಕಾದ ಪರಿಸ್ಥಿತಿ ಒದಗಿದೆ, ಇದು ಖಂಡಿತ ತಪ್ಪಲ್ಲ. ಆದರೆ ಪ್ರಸ್ತುತ ನನ್ನ ಪ್ರಶ್ನೆ ಇರುವುದು ಗಂಡಸರು ತಮ್ಮ ಪತ್ನಿಯ ಮೇಲೆ ಚಲಾಯಿಸುವ ಅಧಿಕಾರ ಸಾಧುವಾದುದೇ? ಪತಿಯಾದ ಮಾತ್ರಕ್ಕೆ ಪತ್ನಿಯನ್ನು ಬಯ್ಯುವ, ಅವಮಾನಿಸುವ, ಹೊಡೆಯುವ, ಹಲ್ಲೆ ಮಾಡುವ ಎಲ್ಲ ಅಧಿಕಾರಗಳು ಆತನಿಗೆ ಇವೆಯೇ?



ನಾನು ನನ್ನ ಹೆಂಡತಿಯನ್ನು ಪ್ರೀತಿಸುತ್ತೇನೆ, ಅಂತೆಯೇ ಆಕೆಯನ್ನು ಹೊಡೆಯುವ ಹಕ್ಕು ನನಗಿದೆ ಎಂದು ವಿತಂಡವಾದ ಮಾಡುವ ಪುರುಷರೇ, ನಿಮ್ಮ ಹೆಂಡತಿ ನಿಮಗಿಂತ ನಿಮ್ಮನ್ನು ಹೆಚ್ಚು ಪ್ರೀತಿಸುತ್ತಾಳೆ ಅಂದರೆ ಆಕೆ ನಿಮ್ಮನ್ನು ಹೊಡೆಯಲು ನಿಮಗಿಂತ ಹೆಚ್ಚು ಹಕ್ಕನ್ನು ಹೊಂದಿರಬಹುದಲ್ಲವೇ ಎಂದು ಕೇಳಿದರೆ ನಿಮ್ಮ ಉತ್ತರ ಏನಾಗಿರಬಹುದು?

ಸರಿ ತಪ್ಪುಗಳ ಯುದ್ಧದಲ್ಲಿ ಹೆಂಡತಿ ನಿಮ್ಮ ವಿರೋಧ ಪಕ್ಷದಲ್ಲಿ ಇದ್ದಾಳೆ ಎಂದು ಭಾವಿಸದಿರಿ. ಆಕೆ ನಿಮ್ಮ ಸಹಭಾಗಿ, ನಿಮಗೆ ಸರಿಸಾಟಿಯಾಗಿದ್ದರೂ ನಿಮ್ಮ ಬೆನ್ನ ಹಿಂದೆ ನಿಂತು ನಿಮ್ಮ ಬದುಕಿನ ಒಳಿತು-ಕೆಡುಕುಗಳಲ್ಲಿ ನಿಮಗೆ ಜೊತೆ ನೀಡುವ ಸಂಗಾತಿಯಾಕೆ. ನೀವು ಆಕೆಯ ನ್ಯೂನತೆಗಳತ್ತ ನಿಮ್ಮ ಬೆರಳನ್ನು ತೋರಿಸುವಾಗ ನೀವು ನಿಜವಾಗಿಯೂ ಆಕೆಯತ್ತ ಬೆರಳು ತೋರುತ್ತಿರುವಿರೋ ಅಥವಾ ಆಕೆಯ ಮೇಲೆ ನಿಮ್ಮ ಬದುಕಿನ ಒತ್ತಡಗಳನ್ನು ಸಂಘರ್ಷಗಳನ್ನು ಹೇರುತ್ತಿರುವಿರೋ ಎಂಬುದನ್ನು ತುಸು ಯೋಚಿಸಿ.

ನೀವು ಅರಿತುಕೊಂಡಿರುವುದಕ್ಕಿಂತ ಹೆಚ್ಚು ಅಗೋಚರವಾದ ಭಾರವನ್ನು ಆಕೆ ತನ್ನ ಹೆಗಲ ಮೇಲೆ ಹೊತ್ತಿದ್ದಾಳೆ. ನೀವು ವಾಸಿಸುವ ಮನೆ, ತಿನ್ನುವ ಆಹಾರ, ಧರಿಸುವ ಉಡುಪುಗಳು, ಕೆಲಸದಿಂದ ದಣಿದು ಮನೆಗೆ ಬಂದಾಗ ಬಯಸುವ ಬೆಚ್ಚಗಿನ ಹೃದಯಸ್ಪರ್ಶಿ ವಾತಾವರಣ ಎಲ್ಲವೂ ಕೂಡ ಆಕೆಯ ಕೈಚಳಕದಲ್ಲಿ, ಮೌನವಾಗಿ ಆಕೆ ಭರಿಸುವ ತ್ಯಾಗದಲ್ಲಿ ತನ್ನವರಿಗಾಗಿ ಆಕೆ ತೋರುವ ಪ್ರೀತಿಯಲ್ಲಿ ಮೂಡಿ ಬಂದಿರುತ್ತವೆ. ಹಾಗೆಂದು ಆಕೆ ದಣಿಯುವುದಿಲ್ಲ ಎಂದಲ್ಲ ಆ ದಣಿವಿನಲ್ಲೂ ಆಕೆ ತನ್ನವರಿಗಾಗಿ ಪ್ರೀತಿಯಿಂದ ಎಲ್ಲವನ್ನು ಸಜ್ಜು ಮಾಡಿರುತ್ತಾಳೆ, ಪ್ರತಿಯಾಗಿ ಆಕೆ ಬಯಸುವುದು ಒಂದು ನಲ್ಮೆಯ ನುಡಿ, ಪ್ರೀತಿಯ ಮಾತುಕತೆ ಮತ್ತು ಹಿತವಾದ ಸ್ಪರ್ಶವನ್ನು ಮಾತ್ರ. ಆದರೆ ಆಕೆಗೆ ದೊರೆಯುವುದು ನಿಮ್ಮ ಒರಟಾದ, ಕಡು ಕೋಪದ ಬಿರುಸಾದ ಮಾತುಗಳು... ಎಷ್ಟು ನೋಯಬಹುದು ಆಕೆ? ತುಸು ಯೋಚಿಸಿ.

ಪ್ರತಿಕ್ರಿಯೆಯನ್ನು ನೀಡದೆ, ವಿಷಯವನ್ನು ತಿಳಿಸದೆ ನೀವು ನಿಮ್ಮ ಕಾಳಜಿಯನ್ನು ವ್ಯಕ್ತಪಡಿಸುವಿರಿ ಎಂದು ಅಂದುಕೊಳ್ಳುವಿರಿ. ಆದರೆ ನೀವಾಡುವ ಮಾತುಗಳ ತೂಕ ಏನು ಎಂಬುದನ್ನು ಅರಿಯಿರಿ. ನಿಮ್ಮ ಮಾತು ಆಕೆಯ ಮನಸ್ಸಿಗೆ ನೋವನ್ನು ಉಂಟು ಮಾಡಿದೆಯೇ ಎಂದು ಯೋಚಿಸಿ. ನಿಮ್ಮ ಸಾನಿಧ್ಯದಲ್ಲಿ ಆಕೆ ತನ್ನನ್ನು ತಾನು ಸುರಕ್ಷಿತಳು, ಪ್ರೀತಿಸಲ್ಪಡುವವಳು ಮತ್ತು ಸಂತೋಷವಾಗಿರುವಳು ಎಂದು ಭಾವಿಸಬಲ್ಲಳೇ ಅಥವಾ ನಿಮ್ಮ ಕಣ್ಣಲ್ಲಿ ಅಸಡ್ಡೆಯ ಅನಾದರದ ವಸ್ತುವಾಗಿ ಮೂಲೆಗೆ ತಳ್ಳಲ್ಪಡುವಳೆ? ಎಂಬುದನ್ನು ತುಸು ಯೋಚಿಸಿ.

ಒಬ್ಬ ಹೆಣ್ಣು ಮಗಳು ಸುಮ್ಮ ಸುಮ್ಮನೆ ಕುಟುಂಬದ ಯಾವುದೇ ಸದಸ್ಯರನ್ನು ಪ್ರೀತಿಸುವುದನ್ನು ನಿಲ್ಲಿಸುವುದಿಲ್ಲ. ಆದರೆ ಆಕೆ ದಣಿಯುತ್ತಾಳೆ. ಹಾಗೆ ದಣಿಯಲು ಕಾರಣ ಆಕೆಯನ್ನು ಮನೆಯ ಇತರ ಸದಸ್ಯರು ತಪ್ಪು ತಿಳಿದುಕೊಂಡಾಗ. ಆಕೆ ಮಾಡಿಲ್ಲದ ತಪ್ಪುಗಳನ್ನು ಆಕೆಯದು ಎಂಬಂತೆ ತಮಾಷೆ ಮಾಡಿ ಆಕೆಯನ್ನು ಹಂಗಿಸಿದಾಗಲೂ ಮೊದಲ ಬಾರಿ ಸುಮ್ಮನಿರುವ ಆಕೆ ಪದೇ ಪದೇ ಅದು ಪುನರಾವರ್ತನೆಯಾದಾಗ ಆಕೆಯ ಮನ ನೋಯುತ್ತದೆ. ಎಲ್ಲರಿಗೂ ಪ್ರೀತಿಯನ್ನು ಹಂಚುವ ಆಕೆಯ ಮಮತೆಯ ಅಕ್ಷಯ ಪಾತ್ರೆ ಬರಿದಾಗುವುದಿಲ್ಲ ನಿಜ. ಆದರೆ ಆಕೆಗೂ ಪ್ರೀತಿಯ, ಕಾಳಜಿಯ ಅವಶ್ಯಕತೆ ಇರುತ್ತದೆ. ಅದು ಕುಟುಂಬದವರಿಂದ ಬೇಕು ಎಂಬ ಅರಿವು ಕುಟುಂಬಕ್ಕೆ ಮತ್ತು ಮುಖ್ಯವಾಗಿ ಪತಿಯಾದವರಿಗೆ ಇರಲೇಬೇಕು.

ನೀವು ನಿಜವಾಗಿಯೂ ನಿಮ್ಮ ಪತ್ನಿಯನ್ನು ಪ್ರೀತಿಸುತ್ತಿದ್ದರೆ ಆಕೆಯನ್ನು ಗೌರವಿಸಿ. ಆಕೆಯ ಭಾವನೆಗಳನ್ನು, ಹೋರಾಟಗಳನ್ನು, ಕನಸುಗಳನ್ನು ಗೌರವಿಸಿ. ಅದೆಷ್ಟೇ ನೀವು ಒತ್ತಡದಲ್ಲಿದ್ದರೂ ಆಕೆಯೊಂದಿಗೆ ಸಮಾಧಾನದಿಂದ ಮಾತನಾಡಿ. ಹರಿತವಾದ ಮಾತುಗಳನ್ನು, ಪುರುಷ ಅಹಂಕಾರವನ್ನು, ಅಹಮಿಕೆಯನ್ನು ಆಕೆಯ ಮೇಲೆ ಹೇರಬೇಡಿ. ಆಕೆ ನಿಮಗೆ ಅಡುಗೆ ಮಾಡಿ ಹಾಕಬಹುದು, ನಿಮ್ಮ ಮನೆ ಮತ್ತು ಮಕ್ಕಳನ್ನು ನೋಡಿಕೊಳ್ಳುತ್ತಿರಬಹುದು. ಆದರೆ ಆಕೆ ನಿಮ್ಮ ಕೆಲಸದಾಳಲ್ಲ ಎಂಬುದು ನೆನಪಿರಲಿ.

ಆದ್ದರಿಂದ ನಿಮ್ಮ ಪತ್ನಿಯನ್ನು ಹೀಯಾಳಿಸುವ ಮುನ್ನ ಒಂದು ಕ್ಷಣ ನಿಲ್ಲಿ ಆಕೆಯ ಕಣ್ಣುಗಳಲ್ಲಿ ಕಣ್ಣಿಟ್ಟು ನೋಡಿ. ನಿಮ್ಮ ಬದುಕಿನದ್ದಕ್ಕೂ ನಿಮ್ಮೊಂದಿಗೆ ನಡೆಯುವೆ ಎಂದು ಸಪ್ತಪದಿ ಹಾಕಿದ ಆಕೆ ನಿಮ್ಮ ವಿರೋಧಿಯಲ್ಲ. ಬದಲಾಗಿ ನೀವೇ ಆಯ್ದುಕೊಂಡ ಜೀವನ ಸಂಗಾತಿ. ಪ್ರೀತಿ ಎಂದರೆ ಬೇರೆಯವರ ಅಸಹಾಯಕತೆ ಮತ್ತು ದೌರ್ಬಲ್ಯಗಳತ್ತ ಬೆರಳು ಮಾಡಿ ತೋರಿಸುವದಲ್ಲ. ಪ್ರೀತಿಯು ತಮ್ಮ ಸಂಗಾತಿಯನ್ನು ಅವರು ಹೇಗಿದ್ದರೂ ಏನಿದ್ದರೂ ಅವರು ಇರುವಂತೆಯೇ ಅವರನ್ನು ಒಪ್ಪಿಕೊಳ್ಳುವ ಅವರನ್ನು ಗೌರವಿಸುವ ಸಂಗಾತಿಯಾಗಿ. ಕಷ್ಟ ಸುಖಗಳಲ್ಲಿ ಒಬ್ಬರಿಗೊಬ್ಬರು ಆಸರೆಯಾಗಿ.

**– ವೀಣಾ ಹೇಮಂತ್‌ಗೌಡ ಪಾಟೀಲ್.**
**ಮುಂಡರಗಿ.**

### ಬೀದಿ ನಾಟಕದ ಮೂಲಕ ಪಿಎಂ ಸ್ವನಿಧಿ ಯೋಜನೆಯ ಜಾಗೃತಿ ಕಾರ್ಯಕ್ರಮ

# ಪಿಎಂ ಸ್ವನಿಧಿ ಯೋಜನೆ ಯಶಸ್ವಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಬದುಕಿನ ಬಂಡಿ ಸಾಗಿಸಲು ನಿತ್ಯ ಹರಸಾಹಸ ಪಡುವ ಬೀದಿ ಬದಿ ವ್ಯಾಪಾರಿಗಳು ಹೊಟ್ಟೆ ಹೊರೆದುಕೊಳ್ಳಲು ಕೈ ಸಾಲ ಮಾಡಿ, ಮೀಟರ್ ಬಡ್ಡಿ ದಂಧೆಯಲ್ಲಿ ಸಿಲುಕಿ ಹೊಯ್ದಾಡಬೇಕಾದ ಸನ್ನಿವೇಶ ಸೃಷ್ಟಿಯಾದಾಗ ಕೇಂದ್ರ ಸರ್ಕಾರ ಜಾರಿಗೊಳಿಸಿದ ಪಿಎಂ ಸ್ವನಿಧಿ ಯೋಜನೆ ಕಳೆದ 3 ವರ್ಷದಲ್ಲಿ ಯಶಸ್ವಿಯಾಗಿದೆ. ಇದೀಗ ಮತ್ತೊಮ್ಮೆ ಪರಿಷ್ಕೃತ ಮಾರ್ಗದರ್ಶಿ ಸೂತ್ರಗಳ ಮೂಲಕ ಬೀದಿ ಬದಿ ವ್ಯಾಪಾರಸ್ಥರ ಸ್ವಾವಲಂಬಿ ಬದುಕಿಗೆ ಆಸರೆಯಾಗಲಿರುವ ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ ಹೇಳಿದರು.




ಅವರು ಶುಕ್ರವಾರ ಪಟ್ಟಣದ ಪುರಸಭೆಯ ಎದುರು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ, ಜೀವನೋಪಾಯ ಇಲಾಖೆ ಬೆಂಗಳೂರು ಹಾಗೂ ಲಕ್ಷ್ಮೇಶ್ವರ ಪುರಸಭೆ ಸಹಯೋಗದಲ್ಲಿ ನೀಲಗುಂದದ ಬಸವರಾಜ ಜಕ್ಕಮ್ಮನವರ ಸಾರಥ್ಯದ ಜೈ ಭೀಮ್ ಜಾನಪದ ಕಲಾ ತಂಡದಿಂದ ಹಮ್ಮಿಕೊಳ್ಳಲಾಗಿದ್ದ ಬೀದಿ ನಾಟಕದ ಮೂಲಕ ಪಿಎಂ ಸ್ವನಿಧಿ ಯೋಜನೆಯ ಜಾಗೃತಿ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು.

ಬೀದಿ ಬದಿ ವ್ಯಾಪಾರಿಗಳ ಆರ್ಥಿಕ ಸ್ವಾವಲಂಬನೆಗಾಗಿ ಯಾವುದೇ ಭದ್ರತೆ ಪಡೆಯದೆ ನೀಡುವ ಪಿಎಂ ಸ್ವನಿಧಿ ಸಣ್ಣ ಸಾಲ ಬೀದಿ ಬದಿ ವ್ಯಾಪಾರಿಗಳ ಆರ್ಥಿಕ ಸ್ವಾವಲಂಬನೆ, ಮೀಟರ್ ಬಡ್ಡಿ ಸಾಲದ ಸುಳಿಗೆ ಸಿಲುಕುವುದನ್ನು ತಪ್ಪಿಸುವುದೂ ಪಿಎಂ ಸ್ವನಿಧಿ ಯೋಜನೆಯ ಉದ್ದೇಶಗಳಲ್ಲಿ ಒಂದಾಗಿದೆ. ಬೀದಿ ಬದಿಯಲ್ಲಿ ಆರ್ಥಿಕ ಚಟುವಟಿಕೆ ಮಾಡುವ ಎಲ್ಲ ಬಗೆಯ ಸಣ್ಣ ವ್ಯಾಪಾರಿಗಳನ್ನು ಗುರಿಯಾಗಿಸಿಕೊಂಡು ಆರಂಭಗೊಂಡ ಪ್ರಧಾನಮಂತ್ರಿ ಆತ್ಮನಿರ್ಭರ ನಿಧಿ (ಪಿಎಂ ಸ್ವನಿಧಿ) ಕನಿಷ್ಠ 10 ಸಾವಿರದಿಂದ ಗರಿಷ್ಠ 50 ಸಾವಿರದವರೆಗೂ ಸಾಲ ಸೌಲಭ್ಯವನ್ನು ಬೀದಿ ವ್ಯಾಪಾರಿಗಳಿಗೆ ಕಲ್ಪಿಸುತ್ತದೆ ಎಂದು ಮಹೇಶ ಹಡಪದ ತಿಳಿಸಿದರು.

ನಿಮ್ಮ ವ್ಯಾಪ್ತಿಯ ನಗರಪಾಲಿಕೆ, ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ ಸಂಪರ್ಕಿಸಿ ಆಧಾರ್ ಕಾರ್ಡ್, ಬ್ಯಾಂಕ್ ಪಾಸ್‌ಬುಕ್ ಮತ್ತು ವ್ಯಾಪಾರದ ಫೋಟೋ ನೀಡಿ ಐಡಿ ಕಾರ್ಡ್ ಪಡೆದುಕೊಳ್ಳಬಹುದು ಎಂದು ಹೇಳಿದರು.

ಪಟ್ಟಣದ ಭಾನು ಮಾರ್ಕೆಟ್ ಮತ್ತಿತರ ಕಡೆ ಕಲಾ ತಂಡದವರು ಜಾಗೃತಿ ಕಾರ್ಯಕ್ರಮದ ಮೂಲಕ ಗಮನ ಸೆಳೆದರು. ಈ ವೇಳೆ ಪುರಸಭೆ ಸದಸ್ಯರಾದ ಅಶ್ವಿನಿ ಅಂಕಲಕೋಟಿ, ಪೂರ್ಣಿಮಾ ಪಾಟೀಲ, ಮಹದೇವಪ್ಪ ಅಣ್ಣಿಗೇರಿ, ಬಸವರಾಜ ಓದುನವರ, ವಿಜಯ ಕರಡಿ, ವಾಣಿ ಹತ್ತಿ, ಪೂಜಾ ಖರಾಟೆ, ರಾಮಪ್ಪ ಗಡದವರ, ಪ್ರಕಾಶ ಕೊಂಚಿಗೇರಿಮಠ, ನೀಲಪ್ಪ ಪೂಜಾರ, ಬಸವರಾಜ ಮೆಣಸಿನಕಾಯಿ, ಕವಿತಾ ಶರಸೂರಿ, ಸಮುದಾಯ ಸಂಘಟನಾ ಅಧಿಕಾರಿ ಶೋಭಾ ಬೆಳ್ಳಿಕೊಪ್ಪ, ಮಂಜುಳಾ ಗುಂಜಳ, ಮಂಜುನಾಥ ಮುದಗಲ್, ಹನಮಂತಪ್ಪ ನಂದೆಣ್ಣವರ, ನೇತ್ರಾ ಹೊಸಮನಿ, ಲಕ್ಷ್ಮೀ ಓದು, ಇಂದ್ರಾ ಸವಣೂರ, ಹಾಗೂ ಪುರಸಭೆ ಸಿಬ್ಬಂದಿ ವರ್ಗ, ಬೀದಿ ವ್ಯಾಪಾರಸ್ಥರು ಇದ್ದರು.

## ವಿಠ್ಠಲ ರುಕುಮಾಯಿ ದೇವಸ್ಥಾನದಲ್ಲಿ ದಿಂಡಿ ಉತ್ಸವ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಭಾವಸಾರ ಕ್ಷತ್ರಿಯ ಸಮಾಜದವರು ಮೂರು ದಿನಗಳ ಕಾಲ ಪೇಠೆ ರಸ್ತೆಯಲ್ಲಿರುವ ವಿಠ್ಠಲ ರುಕುಮಾಯಿ ದೇವಸ್ಥಾನದಲ್ಲಿ ದಿಂಡಿ ಉತ್ಸವವನ್ನು ಗುರುವಾರದಿಂದ ಪ್ರಾರಂಭಿಸಿದ್ದು, ಪೋತಿ ಸ್ಥಾಪನೆ, ಗುಲಾ ಕೀರ್ತನೆ, ಪ್ರವಚನ ಇತ್ಯಾದಿ ಕಾರ್ಯಕ್ರಮಗಳು ಜರುಗಿದವು.

ಎರಡನೇ ದಿನವಾದ ಶುಕ್ರವಾರ ನಸುಕಿನ 5 ಗಂಟೆಗೆ ಕಾಕಡಾರತಿ ಜರುಗಿ ನಂತರ 7 ಗಂಟೆಯಿಂದ 10 ಗಂಟೆಯವರೆಗೆ ದೇವಸ್ಥಾನದ ಆವರಣದಲ್ಲಿ ಶ್ರೀ ಜ್ಞಾನೇಶ್ವರಿ ಗ್ರಂಥದ 9 ಮತ್ತು 12ನೇ ಅಧ್ಯಾಯದ ಪಾರಾಯಣ ಮಾಡಿದರು. ಸಂಜೆ 7 ಗಂಟೆಗೆ ಕೀರ್ತನೆ, ರಾತ್ರಿ 10 ಗಂಟೆಗೆ ಸ್ಥಳೀಯ ಸಂಗೀತ ಕಲಾವಿದರಿಂದ ಸಂಗೀತ ಕಾರ್ಯಕ್ರಮ, ಸಾಂಪ್ರದಾಯಕ ಬಾರೂಡ ಕಾರ್ಯಕ್ರಮ ನಡೆದವು. ಭಾವಸಾರ ಕ್ಷತ್ರಿಯ ಸಮಾಜ, ಶ್ರೀ ಸಂತ ಜ್ಞಾನೇಶ್ವರ ಯುವಕ ಮಂಡಳ, ಹಿಂಗೂಲಾಂಬಿಕಾ ಮಹಿಳಾ ಮಂಡಳಗಳ ಸದಸ್ಯರು, ಪದಾಧಿಕಾರಿಗಳು ಪಾಲ್ಗೊಂಡಿದ್ದರು.

ಮೂರನೇ ದಿನವಾದ ಶನಿವಾರ ಫಾಲ್ಗುಣ ಬಹುಳ ಅಷ್ಟಮಿಯಂದು ಮುಂಜಾನೆ ಕಾಕಡಾರತಿ, ವಿಶೇಷ ಪೂಜೆ ಅಲಂಕಾರ, ನಂತರ 10 ಗಂಟೆಗೆ ಪಲ್ಲಕ್ಕಿ ಸಮೇತ ನಗರ ಪ್ರದಕ್ಷಿಣೆ, ಮಂಗಳಾರತಿ, ನಂತರ ಮಹಾಪ್ರಸಾದ ಜರುಗಲಿದೆ ಎಂದು ಭಾವಸಾರ ಕ್ಷತ್ರಿಯ ಸಮಾಜದ ಅಧ್ಯಕ್ಷ ಕಿರಣ ನವಲೆ, ಕಾರ್ಯದರ್ಶಿ ವೆಂಕಟೇಶ ಮಾತಾಡೆ ತಿಳಿಸಿದ್ದಾರೆ.

## ಶ್ರೀ ಅನ್ನಪೂರ್ಣೇಶ್ವರಿ ಪ್ರಸಾದ ನಿಲಯಕ್ಕೆ ಚಾಲನೆ



■ ವಿಜಯಸಾಕ್ಷಿ ಸುದ್ದಿ, ಗದಗ

ಅವಳಿ ನಗರದಲ್ಲಿ 5 ರೂಪಾಯಿಗೆ ಹೊಟ್ಟೆ ತುಂಬಾ ಊಟ ನೀಡುವ ಖ್ಯಾತಿ ಪಡೆದ ಶ್ರೀ ಅನ್ನಪೂರ್ಣೇಶ್ವರಿ ಪ್ರಸಾದ ನಿಲಯಕ್ಕೆ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಮರು ಚಾಲನೆ ನೀಡಿದರು.

ದಿ. ಕೆ.ಎಚ್.ಪಾಟೀಲ ಅವರ ಜನ್ಮ ಶತಮಾನೋತ್ಸವದ ಅಂಗವಾಗಿ ಅವರ ಅಭಿಮಾನಿ ಬಳಗದ ವತಿಯಿಂದ ಸಿಹಿಯೊಂದಿಗೆ ಪ್ರಸಾದ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಮಾಜಿ ಶಾಸಕ ಡಿ.ಆರ್. ಪಾಟೀಲ, ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಪ್ರಭು ಬುರಬುರೆ, ಜಿ.ಪಂ ಮಾಜಿ ಅಧ್ಯಕ್ಷರುಗಳಾದ ವಾಸಣ್ಣ ಕುರಡಗಿ, ಸಿದ್ದಲಿಂಗೇಶ್ವರ ಪಾಟೀಲ, ಹಿರಿಯರಾದ ಶಿವರುದ್ರಪ್ಪ ಕಳಸಾಪೂರ, ಗುರುಮೂರ್ತಿ ಮರೆಗುದ್ದಿ, ಜಿ.ಸಿ. ಓದುಮಠ, ಎಸ್.ಎಸ್. ಕೊಪ್ಪಳ, ಬಾಲಚಂದ್ರ ಕೋಟಿ, ಬಸವರಾಜ ಟೆಂಗಿನಕಾಯಿ, ಜಯಣ್ಣ ಶೆಟ್ಟರ, ಚುಳಕಿ, ಸಿ.ವಿ. ಹಿರೇಮಠ, ಸಿ.ಕೆ. ಚಟ್ಟಿ, ಗಂಗಾವತಿ, ಪ್ರಕಾಶ ಅಸುಂಡಿ ದಂಪತಿಗಳು, ಬಸವದಳದ ಅಧ್ಯಕ್ಷರಾದ ವಿ.ಕೆ. ಕರಿಗೌಡ್ರ ದಂಪತಿಗಳು, ಶೇಖಣ್ಣ ಕವಳಿಕಾಯಿ, ಬಸವರಾಜ ಹಡಗಲಿ, ಲಿಂಗದಾಳ ದಂಪತಿಗಳು, ಎಸ್.ವಿ. ಮುಗದ ದಂಪತಿಗಳು, ಐ.ಪಿ. ಮೈದುರಗಿ, ದಾನಯ್ಯ ಗಣಾಚಾರಿ, ಗಂಗಾಧರ ಹಿರೇಮಠ, ಎಂ.ಎಸ್. ಅಂಗಡಿ, ಎಸ್.ವಿ.ಹಿರೇಮಠ, ಶೇಖಣ್ಣ ಅರಳಿ, ಮುತ್ತು ಜಡಿ, ಶೈಲಜಾ, ಸುಭದ್ರಾ ಮುಂಡರಗಿ, ಶ್ರೀರಾಮಕೃಷ್ಣ ಸೇವಾ ಪ್ರತಿಷ್ಠಾನದ ಪದಾಧಿಕಾರಿಗಳಾದ ಮಂಜುನಾಥ ಬೊಮ್ಮನಕಟ್ಟಿ, ಎಸ್.ಎಸ್. ಕಳಸಾಪೂರ, ಮಂಜುನಾಥ ಭಗವತಿ, ಉಮೇಶ ಪೂಜಾರ, ವೆಂಕಟೇಶ ಇಮರಾಪೂರ ಮುಂತಾದವರು ಉಪಸ್ಥಿತರಿದ್ದರು.

### ತಾಯಿ ಪಾರ್ವತಿ ಮಕ್ಕಳ ಬಳಗದ ಪ್ರಾಥಮಿಕ ಶಾಲೆಯಲ್ಲಿ ಬೀಳ್ಕೊಡುಗೆ, ಸನ್ಮಾನ

# ಸೇವಾ ಮನೋಭಾವನೆ ಬೆಳೆದು ಬರಲಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಹಿಳೆಯರು ಸಾಧನೆ ಮಾಡುವ ನಿಟ್ಟಿನಲ್ಲಿ ಮುಂದಡಿಯಿಟ್ಟರೆ ಆ ಕಾರ್ಯ ಯಶಸ್ವಿಯಾಗುವುದರಲ್ಲಿ ಅನುಮಾನವಿಲ್ಲ. ಯಾವುದೇ ಸಂಘ-ಸಂಸ್ಥೆಗಳಿರಲಿ ಅಲ್ಲಿರುವವರು ಪ್ರಾಮಾಣಿಕತೆಯಿಂದ, ಸೇವಾ ಮನೋಭಾವದಿಂದ ತೊಡಗಿಸಿಕೊಂಡಲ್ಲಿ ಅಂತಹ ಸಂಸ್ಥೆಗಳು ಯಶಸ್ಸು ಕಾಣುತ್ತವೆ. ಅದಕ್ಕಾಗಿ ಸೇವಾ ಮನೋಭಾವನೆ ಪ್ರತಿಯೊಬ್ಬರಲ್ಲಿ ಬೆಳೆದು ಬರಬೇಕಾಗಿದೆ ಎಂದು ತಾಯಿ ಪಾರ್ವತಿ ಮಕ್ಕಳ ಬಳಗದ ಉಪಾಧ್ಯಕ್ಷೆ ಜಯಲಕ್ಷ್ಮೀ ಮಹಾಂತಶೆಟ್ಟರ ಹೇಳಿದರು.

ಅವರು ಶುಕ್ರವಾರ ಪಟ್ಟಣದ ತಾಯಿ ಪಾರ್ವತಿ ಮಕ್ಕಳ ಬಳಗದ ಪ್ರಾಥಮಿಕ ಶಾಲೆಯಲ್ಲಿ 7ನೇ ವರ್ಗದ ಮಕ್ಕಳಿಗೆ ಬೀಳ್ಕೊಡುಗೆ ಮತ್ತು ಸಾಧಕರಿಗೆ ಸನ್ಮಾನ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.




ಇಂದಿನ ಆಧುನಿಕ ಕಾಲದಲ್ಲಿ ಮಾಧ್ಯಮ, ತಂತ್ರಜ್ಞಾನ, ಶಿಕ್ಷಣದ ಕಾರಣದಿಂದ ಮಹಿಳೆ ಎಲ್ಲ ಕ್ಷೇತ್ರಗಳಲ್ಲಿ ಸಮರ್ಥವಾಗಿ ಕಾರ್ಯ ನಿರ್ವಹಿಸುವಂತಹ ಸಾಮರ್ಥ್ಯವನ್ನು ಪಡೆದಿದ್ದಾಳೆ ಎನ್ನುವದಕ್ಕೆ ಪಟ್ಟಣದಲ್ಲಿ ಸುಮಾರು 7-8 ದಶಕಗಳಿಂದ ಮಹಿಳೆಯರೆ ಮುನ್ನಡೆಸಿಕೊಂಡು ಬರುತ್ತಿರುವ ತಾಯಿ ಪಾರ್ವತಿ ಮಕ್ಕಳ ಬಳಗದ ಶೈಕ್ಷಣಿಕ ಸಂಸ್ಥೆಗಳು ಶ್ರೇಷ್ಠ ಉದಾಹರಣೆಯಾಗಿದೆ. ಪ್ರಾಥಮಿಕ ಹಂತವನ್ನು ಮುಗಿಸಿ ಪ್ರೌಢಶಾಲಾ ಹಂತಕ್ಕೆ ಕಾಲಿಡಲಿರುವ ಮಕ್ಕಳು ಉತ್ತಮ ಸಾಧನೆ ಮಾಡಿ ಎಂದು ಹಾರೈಸಿದರು.

ಸುವರ್ಣಸಿರಿ ಪ್ರಶಸ್ತಿಗೆ ಭಾಜನರಾದ ಸಂಸ್ಥೆಯ ಕಾರ್ಯದರ್ಶಿ ಜಯಲಕ್ಷ್ಮೀ ಗಡ್ಡದೇವರಮ್ಮಠ, ಪತ್ರಕರ್ತರ ಸಂಘದ ರಾಜ್ಯಮಟ್ಟದ ಪ್ರಶಸ್ತಿಗೆ ಭಾಜನರಾದ ಪತ್ರಕರ್ತ ದಿಗಂಬರ ಪೂಜಾರ, ಸಂಸ್ಥೆಯ ಉಪಾಧ್ಯಕ್ಷೆ ಜಯಲಕ್ಷ್ಮೀ ಮಹಾಂತಶೆಟ್ಟರ ಅವರನ್ನು ಸನ್ಮಾನಿಸಲಾಯಿತು. ಸನ್ಮಾನ ಸ್ವೀಕರಿಸಿ ಮಾತನಾಡಿದ ಜಯಲಕ್ಷ್ಮೀ ಗಡ್ಡದೇವರಮಠ, ಪ್ರಶಸ್ತಿಗಳು, ಸನ್ಮಾನಗಳು ಜವಾಬ್ದಾರಿಯನ್ನು ಹೆಚ್ಚಿಸುತ್ತವೆ. ಸಮಾಜಕ್ಕಾಗಿ ಮಾಡುವ ಕಾರ್ಯಗಳನ್ನು ಸಮಾಜ ಗುರುತಿಸಿ ಗೌರವಿಸಿದಾಗ ತಾವು ಮಾಡಿದ ಕಾರ್ಯದ ಬಗ್ಗೆ ಹೆಮ್ಮೆ ಮೂಡುತ್ತದೆ ಎಂದರು.

ಇದೇ ಸಂದರ್ಭದಲ್ಲಿ ನೂತನ ಮುಖ್ಯೋಪಾಧ್ಯಾಯರಾಗಿ ಅಧಿಕಾರ ಸ್ವೀಕರಿಸಿದ ಜೆ.ವಿ. ಅರಳಿಕಟ್ಟಿ ಅವರನ್ನು ಮಕ್ಕಳು ಮತ್ತು ಸಿಬ್ಬಂದಿಗಳು ಗೌರವಿಸಿದರು. ಸಭೆಯ ಅಧ್ಯಕ್ಷತೆಯನ್ನು ಸಂಸ್ಥೆಯ ಅಧ್ಯಕ್ಷೆ ಸುವರ್ಣಬಾಯಿ ಬಹದ್ದೂರದೇಸಾಯಿ ವಹಿಸಿದ್ದರು. ರೋಹಿಣಿಬಾಯಿ ಬಹದ್ದೂರದೇಸಾಯಿ, ಶಾರದಾ ಮಹಾಂತಶೆಟ್ಟರ, ಪಾಲಕರ ಪ್ರತಿನಿಧಿಗಳಾದ ನಿರ್ಮಲಾ ಬಿಂಕದಕಟ್ಟಿ, ಅಮರೇಶ ತೆಂಬದಮನಿ, ಸಂಸ್ಕೃತ ಪಾಠಶಾಲೆ ಮುಖ್ಯೋಪಾಧ್ಯಾಯ ಭಜಂತ್ರಿ ಉಪಸ್ಥಿತರಿದ್ದರು. ಶಿಕ್ಷಕರಾದ ಐ.ಎ. ಬಳಿಗಾರ ಸ್ವಾಗತಿಸಿದರು, ಪ್ರಕಾಶ ಕೊಂಡಾಬಿಂಗಿ, ಕಮಲಾ ಹಿರೇಮಠ ನಿರೂಪಿಸಿದರು. ಎಸ್.ಕೆ. ಹೂಗಾರ ವಂದಿಸಿದರು.

## ವಿಪ್ರ ಅಡುಗೆದಾರರ ಟ್ರಸ್ಟ್ ಉದ್ಘಾಟನೆ ಇಂದು



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಶ್ರೀ ವೀರನಾರಾಯಣ ದೇವಸ್ಥಾನದ ಕಲ್ಯಾಣ ಮಂಟಪದಲ್ಲಿ ಮಾ. 23ರ ಬೆಳಿಗ್ಗೆ 11 ಗಂಟೆಗೆ ಗದಗ ಜಿಲ್ಲಾ ವಿಪ್ರ ಅಡುಗೆದಾರರು ಮತ್ತು ಸಹಾಯಕರ ಚಾರಿಟೇಬಲ್ ಟ್ರಸ್ಟ್‌ನ ಉದ್ಘಾಟನೆ ಜರುಗಲಿದೆ.

ಬೆಳಿಗ್ಗೆ 8 ಗಂಟೆಯಿಂದ ವೇ.ಮೂ. ರತ್ನಾಕರಭಟ್ಟ ಜೋಶಿ ನೇತೃತ್ವದಲ್ಲಿ ಗಣಹೋಮ, ಗಿರಿಜಾ ಕಲ್ಯಾಣ ನೆರವೇರಲಿದೆ. 11 ಗಂಟೆಗೆ ವೇದಿಕೆ ಕಾರ್ಯಕ್ರಮದಲ್ಲಿ ಟ್ರಸ್ಟ್ ಉದ್ಘಾಟನೆಯನ್ನು ಪಂ. ವರದಾಚಾರ ಕೇಶವಾಚಾರ ಹುನಗುಂದ ನೆರವೇರಿಸುವರು. ಮುಖ್ಯ ಅತಿಥಿಗಳಾಗಿ ವೇ.ಮೂ. ರತ್ನಾಕರಭಟ್ಟ ಜೋಶಿ, ಗಿರೀಶ ಕುಲಕರ್ಣಿ, ವೆಂಕಟೇಶ ಕುಲಕರ್ಣಿ, ಶ್ರೀನಿವಾಸ ಹುಯಿಲಗೋಳ ಪಾಲ್ಗೊಳ್ಳುವರು.

ಕಾರ್ಯಕ್ರಮದಲ್ಲಿ ಗದಗ ನಗರದ ವಿಪ್ರ ಬಂಧುಗಳು ಪಾಲ್ಗೊಳ್ಳಬೇಕೆಂದು ಟ್ರಸ್ಟ್‌ನ ಪದಾಧಿಕಾರಿಗಳು ಪ್ರತಿಕಾ ಪ್ರಕಟಣೆಯ ಮೂಲಕ ವಿನಂತಿಸಿಕೊಂಡಿದ್ದಾರೆ.

## ಈಜಲು ಹೋಗಿ ಇಬ್ಬರು ಯುವಕರು ನೀರುಪಾಲು!

■ವಿಜಯಸಾಕ್ಷಿ ಸುದ್ದಿ, ಹಾಸನ

ಈಜಲು ತೆರಳಿದ್ದ ಇಬ್ಬರು ಯುವಕರು ನೀರುಪಾಲಾಗಿರುವಂತಹ ಘಟನೆ ಜಿಲ್ಲೆಯ ಸಕಲೇಶಪುರ ತಾಲೂಕಿನ ಹೆನ್ನಲಿ ಗ್ರಾಮದ ಹೇಮಾವತಿ ನದಿಯಲ್ಲಿ ಜರುಗಿದೆ.

### ಎಸ್‌ಬಿಐ ಫೌಂಡೇಶನ್-ಸಂಕಲ್ಪ ಸಂಸ್ಥೆಯಿಂದ 36 ಕೃಷಿ ಹೊಂಡಗಳ ನಿರ್ಮಾಣ

# ಜಲ ಸಂರಕ್ಷಣೆಗೆ ಮಹತ್ತರ ಸಂಕಲ್ಪ

■ವಿಜಯಸಾಕ್ಷಿ ಸುದ್ದಿ, ಡಂಬಳ

ಮುಂಡರಗಿ ಮತ್ತು ಡಂಬಳ ಹೋಬಳಿಯ ಗ್ರಾಮಗಳಲ್ಲಿ ಎಸ್‌ಬಿಐ ಫೌಂಡೇಶನ್ ಸಂಕಲ್ಪ ಸಂಸ್ಥೆಯ ಸಹಕಾರದಿಂದ ರೈತ ಬದು ಯೋಜನೆಯಡಿ ಕೃಷಿ ಹೊಂಡಗಳು ಮತ್ತು ಬದುಗಳನ್ನು ನಿರ್ಮಿಸಲಾಗುತ್ತಿದೆ. ಈ ಯೋಜನೆಗೆ ಎಸ್‌ಬಿಐ ಫೌಂಡೇಶನ್ ಒಂದು ಎಕ್ಸಾವೇಟರ್ ಒದಗಿಸಿದ್ದು, ರೈತರ ಭೂಮಿಯಲ್ಲಿ ನೀರು ಸಂರಕ್ಷಣೆ ಮತ್ತು ಕೃಷಿ ಅಭಿವೃದ್ಧಿಗೆ ಕೈಜೋಡಿಸಿದೆ.

> ಗ್ರಾಮದ ಜನರು ನಮ್ಮ ರೈತ ಬಂಧು ಯೋಜನೆಗೆ ಕೈಜೋಡಿಸಿದರೆ ಹೆಚ್ಚು ಹೆಚ್ಚು ಕೆಲಸ ಮಾಡಲು ಸಾಧ್ಯವಾಗುತ್ತದೆ. ಸಂಕಲ್ಪ ಸಂಸ್ಥೆ ಅದ್ಭುತ ಕೆಲಸ ಮಾಡುತ್ತಿದೆ. ರೈತರು ಇದರ ಸದುಪಯೋಗ ಪಡೆದುಕೊಂಡು, ಅಂತರ್ಜಲ ಮಟ್ಟ ಹೆಚ್ಚಿಸಿ ಉತ್ತಮ ಬೆಳೆಗಳನ್ನು ಬೆಳೆಸಿ ದೇಶಕ್ಕೆ ಉತ್ತಮ ಆಹಾರ ಒದಗಿಸುವಂತಾಬೇಕು.
>
> – ಸಂಜಯ್ ಪ್ರಕಾಶ್.
> ಎಸ್‌ಬಿಐ ಫೌಂಡೇಶನ್‌ನ ಎಂ.ಡಿ.




2022ರ ಮಾರ್ಚ್ 13ರಂದು ಜಾರಿಗೆ ಬಂದು, 22 ಮಾರ್ಚ್ 2023 ವಿಶ್ವ ಜಲ ದಿನದಂದು ಉದ್ಘಾಟನೆಯಾಗಿದೆ. ಈ ಅವಧಿಯಲ್ಲಿ ಒಟ್ಟು 36 ಕೃಷಿ ಹೊಂಡಗಳು ಮತ್ತು 148 ಬದುಗಳ ನಿರ್ಮಾಣ ಮಾಡಲಾಗಿದ್ದು, 132 ರೈತರು ಇದರ ಲಾಭ ಪಡೆಯುತ್ತಿದ್ದಾರೆ. ಇದರಿಂದ 713 ಎಕರೆ ಕೃಷಿ ಭೂಮಿಯಲ್ಲಿ 11.40 ಲಕ್ಷ ಲೀಟರ್ ನೀರಿನ ಅಂತರ್ಜಲ ಮಟ್ಟ ಹೆಚ್ಚಳ ಕಂಡು ಬಂದಿದೆ. ಇದರ ಜೊತೆಗೆ 2 ಇಂಚು ಮಣ್ಣಿನ ಸವಕಳಿ ತಡೆಗಟ್ಟಿ ಫಲವತ್ತಾದ ಬೆಳೆಯನ್ನು ಬೆಳೆಸಲು ನೆರವಾಗಿದೆ. ಈ ವರ್ಷದಲ್ಲಿ ಮುಂಡರಗಿ ತಾಲೂಕಿನಲ್ಲಿ 200 ಕೆರೆಗಳ ನಿರ್ಮಾಣದ ಸಂಕಲ್ಪವನ್ನು ಮಾಡಲಾಗಿದೆ.

ರೈತ ಬಂಧು ಯೋಜನೆಯಲ್ಲಿನ ಎಲ್ಲ ಕಾರ್ಯಗಳು ಇತರರಿಗೆ ಸ್ಫೂರ್ತಿ ನೀಡುವಂತಿದ್ದು, ಇದು ಯಾರೊಂದಿಗೂ ಸ್ಪರ್ಧೆಯಲ್ಲ. ಇದು ಜಲ ಸಂರಕ್ಷಣೆ ಕಾರ್ಯದಲ್ಲಿ ಒಂದು ಮಹತ್ವದ ಹಂತವಾಗಿದೆ. ಎಸ್‌ಬಿಐ ಫೌಂಡೇಶನ್ ತನ್ನ ಸಿಎಸ್‌ಆರ್ ಯೋಜನೆಯಡಿ ಮುಂಬರುವ ವರ್ಷದಲ್ಲಿ, ಗದಗ ಜಿಲ್ಲೆಯ ಶಿರಹಟ್ಟಿ, ಲಕ್ಷ್ಮೇಶ್ವರ ಮತ್ತು ಗದಗ ತಾಲೂಕುಗಳ 25ಕ್ಕಿಂತ ಹೆಚ್ಚು ಹಳ್ಳಿಗಳಲ್ಲಿ ಈ ಕಾರ್ಯವನ್ನು ವಿಸ್ತರಿಸುವ ಯೋಜನೆ ಹೊಂದಿದ್ದು, ಸದಾ ರೈತ ಬಂಧುವಾಗಿ ಸೇವೆ ಸಲ್ಲಿಸುತ್ತಿರುವ ಸಂಕಲ್ಪ ಸಂಸ್ಥೆ ಮತ್ತು ಎಸ್‌ಬಿಐ ಫೌಂಡೇಶನ್ ಈ ಕಾರ್ಯಕ್ಕೆ ನಿರಂತರ ಬೆಂಬಲ ನೀಡುತ್ತಿದೆ. ಇದರ ಸದುಪಯೋಗವನ್ನು ರೈತರು ಪಡೆದುಕೊಳ್ಳಲು ಮುಂದಾಗಬೇಕು ಎನ್ನುತ್ತಾರೆ ಸಂಕಲ್ಪ ಸಂಸ್ಥೆಯ ಸಿಇಒ ಸಿಕಂದರ ಮೀರಾನಾಯಕ.

> ನಮ್ಮನ್ನು ಗುರುತಿಸಿ ನಮ್ಮ ಜಿಲ್ಲೆಯಲ್ಲಿಯೇ ಕೆಲಸ ಮಾಡಲು ನಮಗೆ ಅವಕಾಶ ಮಾಡಿಕೊಟ್ಟ ಎಸ್‌ಬಿಐ ಫೌಂಡೇಶನ್‌ಗೆ ಕೃತಜ್ಞತೆಗಳು. ಈ ಯೋಜನೆಯ ಯಶಸ್ಸು ಭವಿಷ್ಯದ ಪೀಳಿಗೆಗೆ ಕೃಷಿ ಅಭಿವೃದ್ಧಿಯ ಮಹತ್ವವನ್ನು ಸಾರಲಿದೆ.
>
> – ಸಿಕಂದರ ಮೀರಾನಾಯಕ.
> ಸಂಕಲ್ಪ ಸಂಸ್ಥೆಯ ಸಿಇಒ.

# ‘ವಿಶ್ವ ಜಲ ದಿನ’ ಆಚರಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಎಸ್.ಎಂ. ಕೃಷ್ಣಾ ನಗರದ ಸರಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆ ನಂ. 12ರಲ್ಲಿ ಸಾಲುಮರದ ತಿಮ್ಮಕ್ಕ, ಇಕೋ ಕ್ಲಬ್ ಅಡಿಯಲ್ಲಿ ವಿಶ್ವ ಜಲ ದಿನಾಚರಣೆಯನ್ನು ಆಚರಿಸಲಾಯಿತು.

ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಯುವ ಧುರೀಣ ಅನಿಲಕುಮಾರ ಸಿದ್ದಮ್ಮನಹಳ್ಳಿ ನೀರಿನ ಮಹತ್ವದ ಕುರಿತು ಮಾತನಾಡಿ, ಶಾಲೆಯಲ್ಲಿ ಇಂಗು ಗುಂಡಿ ನಿರ್ಮಿಸುವುದಾಗಿ ವಾಗ್ದಾನ ಮಾಡಿದರು.

ಶಾಲಾ ಮುಖ್ಯೋಪಾಧ್ಯಾಯ ಎಚ್.ಆರ್. ಕೋಣಿಮನಿ ನೀರಿನ ಮೂಲಗಳ ಸಂರಕ್ಷಣೆ, ಮಾಲಿನ್ಯದ ಕುರಿತು ಮಾತನಾಡಿದರು. ಅಧ್ಯಕ್ಷತೆ ವಹಿಸಿದ್ದ ಶಾಲೆಯ ಎಸ್.ಡಿ.ಎಂ.ಸಿ. ಅಧ್ಯಕ್ಷ ಬಸವರಾಜ ಕಡೇಮನಿ ಮಾತನಾಡಿ, ನೀರು ಪೋಲಾಗದಂತೆ ತಡೆಯುವ ಕ್ರಮಗಳ ಬಗ್ಗೆ ತಿಳಿಸಿ, ಶಾಲೆಯಲ್ಲಿ ಮಳೆ ಕೊಯ್ಲು ವ್ಯವಸ್ಥೆ ಮಾಡುವುದಾಗಿ ಹೇಳಿದರು.

ಶಾಲೆಯ ವಿಜ್ಞಾನ ಶಿಕ್ಷಕರಾದ ಎಂ.ಕೆ. ಹುಯಿಲಗೋಳ ಪ್ರಾಸ್ತಾವಿಕವಾಗಿ, ಶ್ರಿಯಾ ಗಣೇಶ ಸುಲ್ತಾನಪೂರ, ಶಿವಾನಿ ಮಹಾಂತೇಶ ಸಂಗಮದ ವಿಶ್ವಜಲದಿನದ ಅಂಗವಾಗಿ ಮಾತನಾಡಿದರು. ಗಣ್ಯರಾದ ಎಲ್.ಎಮ್. ಮುಲ್ಲಾನವರ, ದುದ್ದುಗೌಡ ಪಾಟೀಲ, ಶಾಲಾ ಶಿಕ್ಷಕಿಯರು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ಶಿಕ್ಷಕರಾದ ಎಸ್.ಟಿ. ಲಮಾಣಿ ಪ್ರಾರ್ಥಿಸಿದರು. ಎಸ್.ಬಿ. ಕಣಕೆ ನಿರೂಪಿಸಿದರು. ಎಸ್.ಯು. ವಕ್ಕಳದ ವಂದಿಸಿದರು.

### ಮಹೇಶ್ವರಿ ಮಹಿಳಾ ಮಂಡಳದಿಂದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ

# ಮಹಿಳೆಯರು ಸಾಧನೆಯ ಹೂವುಗಳಾಗಬೇಕು

■ವಿಜಯಸಾಕ್ಷಿ ಸುದ್ದಿ, ಗದಗ

ಮನುಷ್ಯ ಹುಟ್ಟುವಾಗ ಬರಿಗೈ. ಆದರೆ ಕೊನೆಯಲ್ಲಿ ಒಳ್ಳೆಯ ಹೆಸರಿನೊಂದಿಗೆ ಹೋಗಬೇಕು. ಹೆಸರು ಅಕ್ಷರಗಳಿಂದಿರದೇ ಅದರಲ್ಲಿ ಇತಿಹಾಸ ಇರಬೇಕು. ಮಹಿಳೆಯರು ಇಂತಹ ಸಾಧನೆಯ ಹೂವುಗಳಾಗಬೇಕೆಂದು ಗಜೇಂದ್ರಗಡದ ಅಕ್ಕನ ಬಳಗದ ಅಧ್ಯಕ್ಷೆ ಸಂಯುಕ್ತಾ ಬಂಡಿ ಹೇಳಿದರು.

ಅವರು ಗದುಗಿನ ಮಹೇಶ್ವರಿ ವಿವಿಧೋದ್ದೇಶಗಳ ಮಹಿಳಾ ಮಂಡಳದಿಂದ ಹಮ್ಮಿಕೊಂಡಿದ್ದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ, ಸಾಧಕರಿಗೆ ಸನ್ಮಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಮಹಿಳೆಯರು ತಮ್ಮ ಮನಸ್ಸಿನಲ್ಲಿರುವ ಕೀಳರಿಮೆ ಮತ್ತು ಭಯವನ್ನು ತಗೆದುಹಾಕಿದರೆ ಅದ್ಭುತವಾದ ಸಾಧನೆ ಮಾಡಬಲ್ಲರು. ಮುಖ್ಯವಾಗಿ ಆರ್ಥಿಕವಾಗಿ ಸಬಲರಾಗಬೇಕು. ಕುಟುಂಬ ನಿರ್ವಹಣೆಯಲ್ಲಿ ಪ್ರಮುಖ ಪಾತ್ರ ವಹಿಸುವ ಮಹಿಳೆ ಸಂಸ್ಕೃತಿ-ಧರ್ಮ-ನೈತಿಕ ಮೌಲ್ಯಗಳೊಂದಿಗೆ ತನ್ನ ಕುಟುಂಬವನ್ನು ಉನ್ನತಿಯತ್ತ ಕೊಂಡೊಯ್ಯುವ ಜವಾಬ್ದಾರಿ ಹೊಂದಬೇಕು ಎಂದರು.




ಅಧ್ಯಕ್ಷತೆ ವಹಿಸಿದ್ದ ಮಹೇಶ್ವರಿ ಮಹಿಳಾ ಮಂಡಳದ ಅಧ್ಯಕ್ಷೆ ಜಯಶ್ರೀ ಹಿರೇಮಠ ಮಾತನಾಡಿ, ಮಹಿಳಾ ಸಂಘಟನೆಗಳು ಮಹಿಳೆಯರನ್ನು ಜಾಗೃತಗೊಳಿಸಿ ಅವರನ್ನು ಶಕ್ತರನ್ನಾಗಿಸುತ್ತವೆ. ತಮ್ಮಲ್ಲಿ ತರಬೇತಿ ಪಡೆದ ನೂರಾರು ಮಹಿಳೆಯರು ಸ್ವ-ಉದ್ಯೋಗಿಗಳಾಗಿರುವುದು ಸಂತೋಷ ತಂದಿದೆ ಎಂದರು.

> ಅತಿಥಿಗಳಾಗಿ ಆಗಮಿಸಿದ್ದ ಅಣ್ಣಿಗೇರಿಯ ಜ್ಯೋತಿ ಮಹಿಳಾ ಮಂಡಳದ ಅಧ್ಯಕ್ಷೆ ಶೋಭಾದೇವಿ ಸಿಕ್ಕೇದೇಸಾಯಿ ಮಾತನಾಡಿ, ಮಹಿಳಾ ಶಕ್ತಿ ಅಗಾಧವಾಗಿದೆ. ಮಹಿಳೆಯರು ಶೈಕ್ಷಣಿಕವಾಗಿ ಮುನ್ನಡೆದು ಗೃಹ-ಕೈಗಾರಿಕೆಯತ್ತಲೂ ಗಮನಹರಿಸಿ ಒಳ್ಳೆಯ ಉದ್ಯೋಗಿಗಳಾಗಬೇಕು ಎಂದರು.

ಸಾಧಕ ಮಹಿಳೆಯರಾದ ಲಲಿತಾ ವಸ್ತ್ರದ, ಸರೋಜಾ ಘೋರ್ಪಡೆ, ಅಕ್ಕಮ್ಮ ಗುರಸ್ವಾಮಿಮಠ ವೇದಿಕೆಯ ಮೇಲಿದ್ದರು. ಇದೇ ಸಂದರ್ಭದಲ್ಲಿ ಮಹಿಳಾ ಉದ್ಯಮಿಗಳಾದ ಹೊಂಬಳದ ವೀಣಾ ಬೈಲಿ, ಮುಳಗುಂದದ ರೇಣುಕಾ ಬಿಜಾಪೂರ, ಮುಂಡರಗಿಯ ರೇಣುಕಾ ಹಂದ್ರಾಳ, ಬೆಟಗೇರಿಯ ಸಾವಿತ್ರಿ ಚಲವಾದಿ, ಗದುಗಿನ ಉಷಾ ನಾಲವಾಡ, ಮಲ್ಲಸಮುದ್ರದ ಅನ್ನಪೂರ್ಣೇಶ್ವರಿ ಎಲಿ, ಸುಗ್ನಳ್ಳಿಯ ಸುಜಾತಾ ಜಕ್ಕಲಿ, ಗದಗ ಗ್ರಾಮೀಣ ವಲಯದ ಲಲಿತಾ ಸಂಗನಾಳ, ಮಂಜುಳಾ ಮಲ್ಲಾಪೂರ ಇವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಮೇಘಾ ಹೂಗಾರ, ಆಶಾ ದೇಸಾಯಿ, ಆಫ್ರೀನ್ ಭಾನೂ ಈಟಿ, ತೃಪ್ತಿ ಕೋರಿಶೆಟ್ಟರ, ದುರ್ಗಮ್ಮ ಪೂಜಾರ ವಿವಿಧ ಸ್ಪರ್ಧೆಗಳಲ್ಲಿ ಬಹುಮಾನ ಪಡೆದರು.

ಪುಷ್ಪಾ ಮುನವಳ್ಳಿ ಹಾಗೂ ರಶ್ಮಿಕಾ ಹಿರೇಮಠ ಪ್ರಾರ್ಥಿಸಿದರು. ನಿರ್ಮಲಾ ಹೂಗಾರ ಸ್ವಾಗತಿಸಿದರು. ಗೀತಾ ಚವ್ಹಾಣ್ ಪರಿಚಯಿಸಿದರು. ಮಂಜುಳಾ ಸಂಕನಗೌಡ್ರ ನಿರೂಪಿಸಿದರು. ತಸ್ಲಿಂ ಸೊರಟೂರ ವಂದಿಸಿದರು.

### ಹೂವು, ಪೆನ್ನು, ಸಿಹಿ ನೀಡಿ ವಿದ್ಯಾರ್ಥಿಗಳನ್ನು ಪರೀಕ್ಷಾ ಕೇಂದ್ರಕ್ಕೆ ಸ್ವಾಗತಿಸಿದ ಡಿಸಿ, ಸಿಇಓ


# ‘ಮಿಷನ್ ವಿದ್ಯಾಕಾಶಿ’ ವಿಶ್ವಾಸ ಮೂಡಿಸಿದೆ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಪ್ರಸಕ್ತ ಸಾಲಿನ ಎಸ್.ಎಸ್.ಎಲ್.ಸಿ ಪರೀಕ್ಷೆಗಳು ಶುಕ್ರವಾರದಿಂದ ಆರಂಭವಾಗಿದ್ದು, ಪ್ರಥಮ ಪರೀಕ್ಷೆಗಾಗಿ ಮಾಳಮಡ್ಡಿ ಕೆ.ಇ. ಬೋರ್ಡ್ ಶಾಲೆಯಲ್ಲಿ ಸ್ಥಾಪಿಸಿರುವ ಪರೀಕ್ಷಾ ಕೇಂದ್ರಕ್ಕೆ ಆಗಮಿಸಿದ್ದ ಪರೀಕ್ಷಾರ್ಥಿಗಳಿಗೆ ಜಿಲ್ಲಾಧಿಕಾರಿ ದಿವ್ಯ ಪ್ರಭು ಹಾಗೂ ಜಿ.ಪಂ ಸಿಇಓ ಭುವನೇಶ ಪಾಟೀಲ ಗುಲಾಬಿ ಹೂವು, ಪೆನ್ನು ಮತ್ತು ಸಿಹಿ ನೀಡಿ ಶುಭ ಹಾರೈಸಿದರು.

ವಿದ್ಯಾರ್ಥಿಗಳು ಉತ್ಸಾಹ ಮತ್ತು ಆತ್ಮವಿಶ್ವಾಸದಿಂದ ಪರೀಕ್ಷೆ ಬರೆಯುವುದಾಗಿ ಹೇಳಿದರಲ್ಲದೆ, ಮಿಷನ್ ವಿದ್ಯಾಕಾಶಿಯ ಚಟುವಟಿಕೆಗಳಿಂದ ಪರೀಕ್ಷೆಯ ಬಗ್ಗೆ ಮೂಡುವ ಭಯ, ಆತಂಕ ದೂರವಾಗಿದೆ ಎಂದರು.

ನಂತರ ಜಿಲ್ಲಾಧಿಕಾರಿಗಳು ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿ, ಕಳೆದ ಒಂದು ವರ್ಷದಿಂದ ಮಿಷನ್ ವಿದ್ಯಾ ಕಾಶಿ ಮೂಲಕ ವಿವಿಧ ರೀತಿಯ ಪರೀಕ್ಷೆ, ವಿಶೇಷ ಕಾರ್ಯಕ್ರಮಗಳನ್ನು ಮಾಡಿರುವ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳು ಆತ್ಮವಿಶ್ವಾಸದಿಂದ ಪರೀಕ್ಷೆ ಬರೆಯುತ್ತಿದ್ದಾರೆ. ವಿಶೇಷವಾಗಿ ಇಂದು ಒಂದು ಹಬ್ಬದ ವಾತಾವರಣ ಸೃಷ್ಟಿ ಮಾಡಬೇಕು ಎಂದು ತುಂಬಾ ಖುಷಿಯಿಂದ ಈ ಸ್ವಾಗತ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದೇವೆ.




ಇಲ್ಲಿ ನಮ್ಮ ಇಲಾಖೆಯ ಎಲ್ಲ ಹಿರಿಯ ಅಧಿಕಾರಿಗಳು, ಸಂಸ್ಥೆಯ ಎಲ್ಲ ಪದಾಧಿಕಾರಿಗಳು ಜೊತೆಗೆ ಇದ್ದಾರೆ. ಇವತ್ತು ಮಕ್ಕಳಿಗೆ ಯಾವುದೇ ಭಯವಿಲ್ಲದೆ, ಯಾವುದೇ ಅಡೆತಡೆಗಳು ಇಲ್ಲದೆ, ಆತ್ಮವಿಶ್ವಾಸದಿಂದ ಮತ್ತು ತುಂಬಾ ಖುಷಿಯಿಂದ ಪರೀಕ್ಷೆಯನ್ನು ಬರೆಯಬೇಕು ಎಂಬ ನಿಟ್ಟಿನಲ್ಲಿ ಪರೀಕ್ಷಾ ಕೇಂದ್ರಗಳಲ್ಲಿ ಒಳ್ಳೆಯ ವಾತಾವರಣ ಸೃಷ್ಟಿಸಲು ಈ ವಿಶೇಷ ಕಾರ್ಯಕ್ರಮ ಮಾಡಿ, ವಿದ್ಯಾರ್ಥಿಗಳಿಗೆ ಹೂಗುಚ್ಛ, ಸಿಹಿಯನ್ನು ನೀಡುವ ಮುಖಾಂತರ ಸ್ವಾಗತಿಸಿದ್ದೇವೆ ಎಂದು ಹೇಳಿದರು.

> **ಪರೀಕ್ಷಾ ಹಾಜರಾತಿ**
>
> ಪ್ರಸಕ್ತ ಸಾಲಿನ ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆ-1ರ ಪ್ರಥಮ ಭಾಷೆ ಪರೀಕ್ಷೆಗೆ 437 ವಿದ್ಯಾರ್ಥಿಗಳು ಗೈರು ಹಾಜರಾಗಿದ್ದು, 28,130 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದಾರೆ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಸ್.ಎಸ್. ಕೆಳದಿಮಠ ತಿಳಿಸಿದ್ದಾರೆ.

ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ವಿದ್ಯಾರ್ಥಿಗಳಿಗೆ ಹೂವು ನೀಡಿ, ಶುಭ ಹಾರೈಸಿದರು. ನಂತರ ಡಿಸಿ ಹಾಗೂ ಅಧಿಕಾರಿಗಳು ಪರೀಕ್ಷಾ ಕೊಠಡಿಗಳಿಗೆ ತೆರಳಿ, ಸಿದ್ಧತೆಗಳನ್ನು ಪರಿಶೀಲಿಸಿದರು.

ಈ ಸಂದರ್ಭದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಅಶೋಕ ಸಿಂದಗಿ, ಕಾರ್ಯಕ್ರಮ ಸಂಚಾಲಕರಾದ ವಿನಾಯಕ ಜೋಶಿ, ಕೆ.ಇ. ಬೋರ್ಡ್ ಸಂಸ್ಥೆಯ ಕಾರ್ಯದರ್ಶಿ ಡಿ.ಎಸ್. ರಾಜಪುರೋಹಿತ, ವಿಶೇಷ ಅಭಿವೃದ್ಧಿ ಅಧಿಕಾರಿ ಗುರುರಾಜ ಜಮಖಂಡಿ, ಪ್ರಾಚಾರ್ಯ ಎನ್.ಎಸ್. ಗೋವಿಂದರೆಡ್ಡಿ, ಅಸೋಸಿಯೇಷನ್ ಆಫ್ ಕನ್ಸಲ್ಟಿಂಗ್ ಸಿವಿಲ್ ಇಂಜಿನಿಯರ್ಸ್ ಧಾರವಾಡ ಲೋಕಲ್ ಸೆಂಟರ್ ಅಧ್ಯಕ್ಷ ಸುನಿಲ ಬಾಗೇವಾಡಿ ಮತ್ತು ಸದಸ್ಯರು, ಧಾರವಾಡ ಟ್ಯುಟೋರಿಯಲ್ ಅಸೋಸಿಯೇಷನ್ ಅಧ್ಯಕ್ಷ ನಾಗೇಶ ಅಣ್ಣಿಗೇರಿ, ಮಹಾನಗರ ಪಾಲಿಕೆ ಸದಸ್ಯ ವಿಷ್ಣು ಕೊಲ್ಲಹಳ್ಳಿ, ಸುಭೋದ ಶಿಕ್ಷಣ ಸಮಿತಿ ಅಧ್ಯಕ್ಷ ಗಿರಿಧರ ಕಿನ್ನಾಳ ಹಾಗೂ ಇತರರು ಉಪಸ್ಥಿತರಿದ್ದರು.

# ರವಿ ಗಿರಿಣಿ ನಿಧನಕ್ಕೆ ಸಂತಾಪ


■ವಿಜಯಸಾಕ್ಷಿ ಸುದ್ದಿ, ಗದಗ

ಖಾಸಗಿ ಸುದ್ದಿ ವಾಹಿನಿಯ ಛಾಯಗ್ರಾಹಕರಾಗಿದ್ದ ರವಿ ಗಿರಿಣಿ ಅವರ ನಿಧನಕ್ಕೆ ಗದಗ ಜಿಲ್ಲಾ ಬಿಜೆಪಿ ವತಿಯಿಂದ ಸಂತಾಪ ಸೂಚಿಸಿದರು.

ಬಿಜೆಪಿ ಗದಗ ಜಿಲ್ಲಾಧ್ಯಕ್ಷರಾದ ತೋಟಪ್ಪ(ರಾಜು) ಕುರುಡಗಿ, ಶಾಸಕರಾದ ಸಿ.ಸಿ. ಪಾಟೀಲ, ಡಾ. ಚಂದ್ರು ಲಮಾಣಿ, ಮಾಜಿ ಸಚಿವರಾದ ಕಳಕಪ್ಪ ಬಂಡಿ, ವಿ.ಪ. ಸದಸ್ಯ ಎಸ್.ವ್ಹಿ. ಸಂಕನೂರ, ಯುವ ಧುರೀಣರಾದ ಅನಿಲ ಮೆಣಸಿನಕಾಯಿ, ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಲಿಂಗರಾಜ ಪಾಟೀಲ, ಆರ್.ಕೆ. ಚವ್ಹಾಣ, ಫಕ್ಕೀರೇಶ ರಟ್ಟಿಹಳ್ಳಿ, ಗದಗ ನಗರ ಮಂಡಲ ಅಧ್ಯಕ್ಷ ಸುರೇಶ ಮರಳಪ್ಪನವರ, ಪ್ರಮುಖರಾದ ಎಂ.ಎಸ್. ಕರಿಗೌಡ್ರ, ಜಗನ್ನಾಥಸಾ ಭಾಂಡಗೆ, ಮೋಹನ ಮಾಳಶೆಟ್ಟಿ, ಶ್ರೀಕಾಂತ ಖಟವಟೆ, ತೋಟಸಾ ಭಾಂಡಗೆ, ಈಶ್ವರಪ್ಪ ಮುನವಳ್ಳಿ, ಸಂಗಮೇಶ ದುಂದೂರ, ವಿಜಯಕುಮಾರ ಗಡ್ಡಿ, ಬಿ.ಎಚ್. ಲದ್ವಾ, ಎಂ.ಎಂ. ಹಿರೇಮಠ ಹಾಗೂ ಜಿಲ್ಲೆಯ 9 ಮಂಡಲ ಅಧ್ಯಕ್ಷರು, ಪ್ರಧಾನ ಕಾರ್ಯದರ್ಶಿಗಳು, ಬಿಜೆಪಿ ಪಕ್ಷದ ಎಲ್ಲ ಚುನಾಯಿತ ಪ್ರತಿನಿಧಿಗಳು, ಪದಾಧಿಕಾರಿಗಳು, ಮುಖಂಡರು, ಕಾರ್ಯಕರ್ತರು ಪಾಲ್ಗೊಂಡು ಸಂತಾಪ ಸೂಚಿಸಿದರು.




## ನಿಧನ



**ವಿರೂಪಾಕ್ಷಪ್ಪ ಗೂಳರಡ್ಡಿ**

**ಗದಗ:**ತಾಲೂಕಿನಬಳಗಾನೂರ ಗ್ರಾಮದಹಿರಿಯರಾದವಿರೂಪಾಕ್ಷಪ್ಪ ಅಂದಾನಪ್ಪ ಗೂಳರಡ್ಡಿ (95) ಶನಿವಾರನಿಧನರಾದರು.ಮೃತರು ಚಿಕೇನಕೊಪ್ಪದ ಶ್ರೀ ಚನ್ನವೀರ ಶರಣರಮತ್ತುಶ್ರೀಮಠದಪರಮ ಭಕ್ತರಾಗಿದ್ದು,ಅಪಾರಬಂಧು-ಬಳಗವನ್ನು ಅಗಲಿದ್ದಾರೆ.

### ವಿಶ್ವ ಮಹಿಳಾ ದಿನಾಚರಣೆ, ಗ್ರಾಮ ಮಟ್ಟದ ಸಂಜೀವಿನಿ ಒಕ್ಕೂಟ ಯೋಜನೆಯ ವಾರ್ಷಿಕೋತ್ಸವ

# ಮಹಿಳೆ ಸಾಧನೆಯ ಶಿಖರ ತಲುಪಿದ್ದಾಳೆ

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರತಿಯೊಬ್ಬ ವ್ಯಕ್ತಿಯ ಜೀವನದಲ್ಲಿ ಮಹಿಳೆಯ ಪಾತ್ರ ಮಹತ್ವದ್ದಗಿದೆ. ಆಕೆ ತಾಯಿಯಾಗಿ, ತಂಗಿಯಾಗಿ, ಪತ್ನಿಯಾಗಿ ಬಾಳನ್ನು ಬೆಳಗಿಸುತ್ತಾಳೆ ಎಂದು ಹರ್ಲಾಪೂರ ಕೆನರಾ ಬ್ಯಾಂಕ್ ಮ್ಯಾನೇಜರ್ ಜಿ.ಎಸ್. ಅಳವುಂಡಿ ಹೇಳಿದರು.

ಇಲ್ಲಿನ ತಿಮ್ಮಾಪೂರ ಗ್ರಾಮದ ಶ್ರೀ ಕರಿಯಮ್ಮ ದೇವಿ ಸಮುದಾಯ ಭವನದಲ್ಲಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಗದಗ ಹಾಗೂ ಗ್ರಾಮ ಮಟ್ಟದ ಸಂಜೀವಿನಿ ಒಕ್ಕೂಟ ಯೋಜನೆಯ ವಾರ್ಷಿಕೋತ್ಸವ ಹಾಗೂ ವಿಶ್ವ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡುತ್ತಿದ್ದರು.

ವೈಯಕ್ತಿಕವಾಗಿ ಮಹಿಳೆ ಮನೆಯ ಜವಾಬ್ದಾರಿಯನ್ನು ಹೊರುವ ಜೊತೆಗೆ ಒಬ್ಬ ಶಿಕ್ಷಕಿಯಾಗಿ, ಇಂಜಿನಿಯರ್ ಆಗಿ, ಪೈಲೆಟ್ ಆಗಿಯೂ ಉತ್ತಮವಾಗಿ ಕೆಲಸ ಮಾಡಬಲ್ಲಳು. ಸಮಾಜದ ಕಟ್ಟುಪಾಡುಗಳ ನಡುವೆಯೂ ಮಹಿಳೆ ಸಾಧನೆಯ ಶಿಖರವನ್ನು ಮುಟ್ಟಿದಾಳೆ ಎಂದರು.



ಅತಿಥಿಗಳಾಗಿ ಪಾಲ್ಗೊಂಡಿದ್ದ ಮಂಡೇಶ ಮೇಲಮನವರ ಮಾತನಾಡಿ, ಮಹಿಳಾ ಸಂಜೀವಿನಿ ಸಂಘಗಳು ಸರ್ಕಾರದಿಂದ ಬರುವ ಹಲವಾರು ಯೋಜನೆಗಳನ್ನು ಪಡೆದುಕೊಂಡು ಆರ್ಥಿಕವಾಗಿ ಸಬಲರಾಗಬೇಕು. ಸ್ವಯಂ ಉದ್ಯೋಗ ಕೈಗೊಳ್ಳಲು ನಮ್ಮ ಇಲಾಖೆಯಿಂದ ಅನೇಕ ತರಬೇತಿ ಶಿಬಿರವನ್ನು ಹಮ್ಮಿಕೊಳ್ಳಲಾಗುತ್ತಿದ್ದು, ಅದರ ಪ್ರಯೋಜನ ಪಡೆಯಬೇಕು ಎಂದು ಹೇಳಿದರು.

ಕಾರ್ಯಕ್ರಮವನ್ನು ಗ್ರಾ.ಪಂ ಪಿಡಿಓ ಶಿವಲೀಲಾ ಗೋಳಪ್ಪನವರ ಉದ್ಘಾಟಿಸಿದರು. ಅಧ್ಯಕ್ಷತೆಯನ್ನು ಸಂಜೀವಿನಿ ಮಹಿಳಾ ಸಂಘದ ಅಧ್ಯಕ್ಷರಾದ ಅನ್ನಪೂರ್ಣ ಮದರಿ ವಹಿಸಿದ್ದರು. ಕಾರ್ಯಕ್ರಮದಲ್ಲಿ ಸಾಧಕ ಮಹಿಳೆಯರನ್ನು ಸನ್ಮಾನಿಸಲಾಯಿತು.

> ರೈತ ಸಂಘದ ಗದಗ ಜಿಲ್ಲಾ ಅಧ್ಯಕ್ಷ ಯಲ್ಲಪ್ಪ ಬಾಬರಿ ಮಾತನಾಡಿ, ಮಹಿಳೆಯರು ಸಾಮಾಜಿಕ, ಶೈಕ್ಷಣಿಕ, ಕೃಷಿ, ತಂತ್ರಜ್ಞಾನ, ಸಂಗೀತ, ರಾಜಕೀಯ ಸಾಂಸ್ಕೃತಿಕ ಹೀಗೆ ಹಲವು ಕ್ಷೇತ್ರಗಳಲ್ಲಿ ತನ್ನನ್ನು ತಾನು ತೊಡಗಿಸಿಕೊಂಡು ಪುರುಷರಿಗೆ ಸಮಾನವಾಗಿ ನಿಂತಿದ್ದಾಳೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ತಾಲೂಕಾ ಕಾರ್ಯಕ್ರಮ ವ್ಯವಸ್ಥಾಪಕ ಸಿದ್ದೇಶ ಸತ್ಯಣ್ಣವರ, ಸಮೂಹ ಮೇಲ್ವಿಚಾರಕ ಬಸಪ್ಪ ಗಡಾದ, ಪಶು ವೈದ್ಯರಾದ ಅಭಿಷೇಕ ಹೊಳೆಗೆ, ಸೀತಾ ಜೋಗಿನ, ಶಾಂತವ್ವ ಹಂಚಿನಾಳ, ಸಾವಿತ್ರಿ ಕೊಪ್ಪದ, ಶಾಂತವ್ವ ಇದ್ಲಿ, ಪ್ರೇಮವ್ವ ಗಂಗರಾತ್ರಿ, ಹನುಮವ್ವ ತಳವಾರ ಸ್ಥೆರಿದಂತೆ ಒಕ್ಕೂಟದ ಪದಾಧಿಕಾರಿಗಳು, ಸ್ವ-ಸಹಾಯ ಸಂಘದ ಮಹಿಳೆಯರು ಪಾಲ್ಗೊಂಡಿದ್ದರು.

# ಪ್ರೇಮನಾಥ ಬಣ್ಣದ ನಿಧನಕ್ಕೆ ಸಂತಾಪ



■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಾರ್ಟಿಯ ಹಿರಿಯ ಧುರೀಣರಾದ ಪ್ರೇಮನಾಥ ಬಣ್ಣದ ಅವರ ನಿಧನಕ್ಕೆ ಗದಗ ಜಿಲ್ಲಾ ಬಿಜೆಪಿ ಸಂತಾಪ ಸೂಚಿಸಿದೆ.

ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ, ಶಾಸಕರಾದ ಸಿ.ಸಿ. ಪಾಟೀಲ, ಡಾ. ಚಂದ್ರು ಲಮಾಣಿ, ಮಾಜಿ ಸಚಿವ ಕಳಕಪ್ಪ ಬಂಡಿ, ವಿ.ಪ. ಸದಸ್ಯ ಎಸ್.ವ್ಹಿ. ಸಂಕನೂರ, ಯುವ ಧುರೀಣರಾದ ಅನಿಲ ಮೆಣಸಿನಕಾಯಿ, ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ, ಆರ್.ಕೆ. ಚವ್ಹಾಣ, ಫಕ್ಕೀರೇಶ ರಟ್ಟಿಹಳ್ಳಿ, ಗದಗ ನಗರ ಮಂಡಲ ಅಧ್ಯಕ್ಷ ಸುರೇಶ ಮರಳಪ್ಪನವರ, ಪ್ರಮುಖರಾದ ಎಂ.ಎಸ್. ಕರಿಗೌಡ್ರ, ಜಗನ್ನಾಥಸಾ ಭಾಂಡಗೆ, ಮೋಹನ ಮಾಳಶೆಟ್ಟಿ, ಶ್ರೀಕಾಂತ ಖಟವಟೆ, ತೋಟಸಾ ಭಾಂಡಗೆ, ಈಶ್ವರಪ್ಪ ಮುನವಳ್ಳಿ, ಸಂಗಮೇಶ ದುಂದೂರ, ವಿಜಯಕುಮಾರ ಗಡ್ಡಿ, ಬಿ.ಎಚ್. ಲದ್ವಾ, ಎಂ.ಎಂ. ಹಿರೇಮಠ ಹಾಗೂ ಜಿಲ್ಲೆಯ 9 ಮಂಡಲ ಅಧ್ಯಕ್ಷರು, ಪ್ರಧಾನ ಕಾರ್ಯದರ್ಶಿಗಳು, ಬಿಜೆಪಿ ಪಕ್ಷದ ಎಲ್ಲ ಚುನಾಯಿತ ಪ್ರತಿನಿಧಿಗಳು, ಪದಾಧಿಕಾರಿಗಳು, ಮುಖಂಡರು, ಕಾರ್ಯಕರ್ತರು, ಅಭಿಮಾನಿಗಳು ಸಂತಾಪ ಸೂಚಿಸಿದರು.

### ಪೊಲೀಸ್ ಇಲಾಖೆ, ಸಖಿ ಸಹೇಲಿ ಸಹಯೋಗದಲ್ಲಿ ವಿದ್ಯಾರ್ಥಿಗಳಿಗೆ 'ಕಾನೂನು ಅರಿವು' ಕಾರ್ಯಕ್ರಮ

# ಮಕ್ಕಳ ಮೇಲಿನ ದೌರ್ಜನ್ಯ ಕೊನೆಗೊಳಿಸೋಣ

■ವಿಜಯಸಾಕ್ಷಿ ಸುದ್ದಿ, ಗದಗ

ಮಕ್ಕಳ ಮೇಲಿನ ದೌರ್ಜನ್ಯವು ಮಕ್ಕಳ ಉಳಿವು ಹಾಗೂ ಆರೋಗ್ಯಕ್ಕೆ ಮಾತ್ರವಲ್ಲದೆ ಅವರ ಭಾವನಾತ್ಮಕ ಯೋಗಕ್ಷೇಮ ಹಾಗೂ ಭವಿಷ್ಯದ ಕನಸುಗಳಿಗೆ ಅಪಾಯವನ್ನು ತಂದೊಡ್ಡುತ್ತದೆ. ಮಕ್ಕಳ ಮೇಲಿನ ದೌರ್ಜನ್ಯವನ್ನು ಕೊನೆಗೊಳಿಸಲು ನಾವೆಲ್ಲವೂ ಮುಂದಾಗೋಣ ಎಂದು ಗದಗ ಮಹಿಳಾ ಪೊಲೀಸ್ ಠಾಣೆಯ ಪಿಎಸ್‌ಐ ಎಚ್.ಡಿ. ಓದುಗೌಡ್ರ ಹೇಳಿದರು.

ಅವರು ಶನಿವಾರ ಗದಗ ಜಿಲ್ಲಾ ಪೊಲೀಸ್ ಇಲಾಖೆ ಹಾಗೂ ಜೇಂಟ್ಸ್ ಗ್ರುಪ್ ಆಫ್ ಸಖಿ ಸಹೇಲಿ ಸಹಯೋಗದಲ್ಲಿ ನಗರದ ಸರಕಾರಿ ಹೆಣ್ಣು ಮಕ್ಕಳ ಶಾಲೆ ನಂ. 1ರಲ್ಲಿ ಹಮ್ಮಿಕೊಂಡಿದ್ದ ಮಕ್ಕಳ ಪಾಲನೆ ಮತ್ತು ರಕ್ಷಣೆ ಪ್ರಯುಕ್ತ ಮಕ್ಕಳ ಮೇಲೆ ಜರುಗುವ ಲೈಂಗಿಕ ದೌರ್ಜನ್ಯ, ಬಾಲ್ಯವಿವಾಹ ಮುಂತಾದವುಗಳ ಕುರಿತ ಕಾನೂನು ಅರಿವು ಕಾರ್ಯಕ್ರಮದಲ್ಲಿ ಮಕ್ಕಳಿಗೆ ಮಾರ್ಗದರ್ಶನ ನೀಡಿ ಮಾತನಾಡಿದರು.

ಮಕ್ಕಳು ಕೆಲವೊಂದು ಅತಿ ಸೂಕ್ಷ್ಮವಾದ ತೊಂದರೆಗಳನ್ನು ಅನುಭವಿಸುತ್ತಿರುತ್ತಾರೆ. ಅಂತಹ ಸಮಸ್ಯೆಗಳನ್ನು ಗೌಪ್ಯವಾಗಿ ಇಡದೇ ಪಾಲಕರೊಂದಿಗೆ




ಅಥವಾ ಶಿಕ್ಷಕರೊಂದಿಗೆ ಹಂಚಿಕೊಂಡರೆ ಅವರು ಸೂಕ್ತ ಪರಿಹಾರ ನೀಡುತ್ತಾರೆ. ಇಂತಹ ಮಕ್ಕಳು ಭಯಭೀತರಾಗಬಾರದು. ಧೈರ್ಯದಿಂದ ಇರಬೇಕು, ನಾವೆಲ್ಲರೂ ನಿಮ್ಮೊಂದಿಗೆ ಇದ್ದೇವೆ ಎಂದರು.

ಪ್ರಾಸ್ತಾವಿಕವಾಗಿ ಹಿರಿಯ ಶಿಕ್ಷಕರಾದ ಎಂ.ಪಿ. ಮೆಣಸಿನಕಾಯಿ ಮಾತನಾಡಿ, ಟಿ.ವ್ಹಿ, ಮೊಬೈಲ್ ಹಾವಳಿಯಿಂದಾಗಿ ಮಕ್ಕಳು ವ್ಯಸನಿಗಳಾಗುತ್ತಿದ್ದಾರೆ. ಮಕ್ಕಳು ಓದಿನೆಡೆಗೆ ಹೆಚ್ಚು ಆಸಕ್ತಿ ವಹಿಸಬೇಕು. ತಮಗೆ ಏನಾದರೂ ತೊಂದರೆ ಆಗುತ್ತಿದ್ದಲ್ಲಿ ಹಿರಿಯರ ಗಮನಕ್ಕೆ ತಂದು ಪರಿಹಾರ ಕಂಡುಕೊಳ್ಳಬೇಕು. ಉತ್ತಮ ಭವಿಷ್ಯ ಹೊಂದುವಲ್ಲಿ ಉತ್ತಮ ವಿಚಾರಗಳನ್ನು ಅಳವಡಿಸಿಕೊಳ್ಳಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ಶಾಲಾ ಮುಖ್ಯೋಪಾಧ್ಯಾಯೆ ಎಸ್.ಎಸ್. ಬಿರಾದಾರ ಮಾತನಾಡಿ, ಮಕ್ಕಳು ಮೌಲ್ಯಯುತವಾದ ಬದುಕನ್ನು ಹೊಂದಬೇಕು. ಹೆಣ್ಣು ಮಕ್ಕಳು ಸುರಕ್ಷತೆಯ ದೃಷ್ಟಿಯಿಂದ ಪಾಲಕರು ಹಾಗೂ

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಜೇಂಟ್ಸ್ ಗ್ರುಪ್ ಆಫ್ ಸಖಿ ಸಹೇಲಿ ಗದಗ ಘಟಕದ ಅಧ್ಯಕ್ಷೆ ಸುಮಾ ಪಾಟೀಲ ಮಾತನಾಡಿ, ಇತ್ತೀಚೆಗೆ ಮಹಿಳೆಯರು ಮತ್ತು ಹೆಣ್ಣು ಮಕ್ಕಳ ಮೇಲಿನ ಹಿಂಸಾಚಾರ ಹಾಗೂ ದೌರ್ಜನ್ಯಗಳು ಹೆಚ್ಚಾಗುತ್ತಿದ್ದು, ವಿದ್ಯಾರ್ಥಿನಿಯರು ಎದೆಗುಂದದೆ ಆತ್ಮಸ್ಥೈರ್ಯವನ್ನು ಬೆಳೆಸಿಕೊಳ್ಳಬೇಕು. ಓದಿನಲ್ಲಿ ಆಸಕ್ತಿ ಹೊಂದಿ ಭವಿಷ್ಯದಲ್ಲಿ ಸಾಧನೆ ಮಾಡಬೇಕು ಎಂದರು.

ಹಿರಿಯರು ಹೇಳಿದ ಮಾತುಗಳತ್ತ ಗಮನವಿಟ್ಟು ಯಾವುದೇ ದುರಭ್ಯಾಸಗಳಿಗೆ ಒಳಗಾಗದೇ ಓದಿ ಸಾಧಿಸಬೇಕು ಎಂದರು. ಶ್ವೇತಾ ಬಿತ್ತಣ್ಣನವರ ಹಾಗೂ ಅನುಷಾ ಅನ್ನಾರೆಡ್ಡಿ ಪ್ರಾರ್ಥಿಸಿದರು. ಎಚ್.ಎಲ್. ಆಸಂಗಿ ಸ್ವಾಗತಿಸಿದರು. ಎಸ್.ಎಫ್. ಹೊಸಮನಿ ನಿರೂಪಿಸಿದರು. ಸಖಿ ಸಹೇಲಿ ಸಂಘಟನೆಯ ಕಾರ್ಯದರ್ಶಿ ಅಶ್ವಿನಿ ಮಾದಗುಂಡಿ ವಂದಿಸಿದರು.

ಕಾರ್ಯಕ್ರಮದಲ್ಲಿ ಆಶಾ ಪಟ್ಟಣಶೆಟ್ಟಿ, ನಿರ್ಮಲಾ ಪಾಟೀಲ, ಶ್ರೀದೇವಿ ಮಹೇಂದ್ರಕರ, ಚಂದ್ರಕಲಾ ಸ್ಥಾವರಮಠ ಹಾಗೂ ಪೊಲೀಸ್ ಇಲಾಖೆಯ ಶಂಕ್ರಮ್ಮ ಕೊರವರ, ಮಂಜುನಾಥ ನ್ಯಾವಿ ಉಪಸ್ಥಿತರಿದ್ದರು.

# ವಾಣಿಜ್ಯ, ಕಂಪ್ಯೂಟರ್ ಪರೀಕ್ಷೆಯಲ್ಲಿ ಸಾಧನೆ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿಯವರು 2025ರ ಜನವರಿ ತಿಂಗಳಿನಲ್ಲಿ ನಡೆಸಿದ ಬೆರಳಚ್ಚು ಪರೀಕ್ಷೆಯಲ್ಲಿ ಇಲ್ಲಿನ ರಾಜ್ ವಾಣಿಜ್ಯ ಮತ್ತು ಕಂಪ್ಯೂಟರ್ ಶಿಕ್ಷಣ ಸಂಸ್ಥೆಯ ವಾಣಿಜ್ಯ ಪರೀಕ್ಷೆಯಲ್ಲಿ ಶೇ. 96 ಮತ್ತು ಗಣಕಯಂತ್ರ ಪರೀಕ್ಷೆಯಲ್ಲಿ ಶೇ. 100ರಷ್ಟು ಫಲಿತಾಂಶ ಸಾಧಿಸಿದೆ.

ಬೆರಳಚ್ಚು ಪರೀಕ್ಷೆಯಲ್ಲಿ 13 ಡಿಸ್ಟಿಂಕ್ಷನ್, ಪ್ರಥಮ ದರ್ಜೆಯಲ್ಲಿ 7 ಮತ್ತು ದ್ವಿತೀಯ ದರ್ಜೆಯಲ್ಲಿ 4 ವಿದ್ಯಾರ್ಥಿಗಳು ಪಾಸಾಗಿದ್ದಾರೆ. ಆಂಗ್ಲ ಬೆರಳಚ್ಚು ಪ್ರಥಮ



ದರ್ಜೆಯಲ್ಲಿ ಪ್ರಥಮ ಸ್ಥಾನ ಗಜೇಂದ್ರಗೌಡ ಎಮ್.ಪಾಟೀಲ ಹಾಗೂ ಪ್ರಶಾಂತ ವಿ. ಚಿಂಚಲಿ (ಶೇ.90.5), ದ್ವಿತೀಯ ಭುವನೇಶ್ವರಿ ಎಮ್. ಯಾಡ್ರವಿ (ಶೇ.87), ತೃತೀಯ ನಿಕಿತಾ ಚಿಗಡೊಳ್ಳಿ (ಶೇ.86) ಪಡೆದಿದ್ದಾರೆ.

ಕನ್ನಡ ಬೆರಳಚ್ಚು ಪ್ರಥಮ ದರ್ಜೆಯಲ್ಲಿ ಪ್ರಥಮ ಸ್ಥಾನ ಶಿಲ್ಪಾ ದಾಸರ (ಶೇ.89), ದ್ವಿತೀಯ ಸ್ಥಾನ ಗಜೇಂದ್ರಗೌಡ ಎಮ್.ಪಾಟೀಲ (ಶೇ.88), ತೃತೀಯ ಸ್ಥಾನ ನಿರಂಜನ ಎಸ್.ಕಿಚಡಿ (ಶೇ.87) ಪಡೆದುಕೊಂಡಡಿದ್ದಾರೆ.

ಕನ್ನಡ ಬೆರಳಚ್ಚು ಪ್ರೌಢ ದರ್ಜೆಯಲ್ಲಿ ಪ್ರಥಮ ಸ್ಥಾನ ಸಹನಾ ಪಾಟೀಲ (ಶೇ.88.5), ದ್ವಿತೀಯ ಸ್ಥಾನ ಸುನಿತಾ ಟಿ.ಹಾವನೂರ (ಶೇ.85.5), ತೃತೀಯ ಸ್ಥಾನ ಲಲಿತಾ ಎಸ್.ಕೋರಿ (ಶೇ.85) ಪಡೆದರೆ, ಆಂಗ್ಲ ಬೆರಳಚ್ಚು ಪ್ರೌಢ ದರ್ಜೆಯಲ್ಲಿ ಪ್ರಥಮ ಸ್ಥಾನ ಸುನಿತಾ ಟಿ.ಹಾವನೂರ (ಶೇ.89.5), ದ್ವಿತೀಯ ಸ್ಥಾನ ಸಹನಾ ಪಾಟೀಲ (ಶೇ.76) ಪಡೆದುಕೊಂಡಿದ್ದಾರೆ.

ಗಣಕಯಂತ್ರ ಪರೀಕ್ಷೆಯ ಪ್ರಥಮ ಸ್ಥಾನ ನಿಶಾಂತ ಅಂಜುಮ ಪಠಾಣ (ಶೇ.81.5), ದ್ವಿತೀಯ ಸ್ಥಾನ ಶ್ರೀಲಕ್ಷ್ಮಿ ಎನ್.ಮಾನವಿ (ಶೇ.79.5), ತೃತೀಯ ಸ್ಥಾನ ಪ್ರಶಾಂತ ಎಮ್.ಗಾಣಗೇರ, ಅನುರೂಪಾ ಎಚ್. ಚಲವಾದಿ (ಶೇ.73) ಪಡೆದಿರುತ್ತಾರೆ.

ಎಲ್ಲ ಸಾಧಕ ವಿದ್ಯಾರ್ಥಿಗಳಿಗೆ ಪ್ರಾಚಾರ್ಯರಾದ ಸತ್ಯಶೀಲಾ ಕೆ.ಬಡಿಗೇರ ಹಾಗೂ ಸಿಬ್ಬಂದಿ ವರ್ಗದವರು ಶ್ಲಾಘಿಸಿದ್ದಾರೆ.

# ವಿದ್ಯುತ್ ದರ ಹೆಚ್ಚಳಕ್ಕೆ ವಿರೋಧ

■ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯುತ್ ಕಾರ್ಮಿಕರ ಪಿಂಚಣಿ ಮತ್ತು ಗ್ರಾಚ್ಯುಟಿಯನ್ನು ಸರಿದೂಗಿಸಲು ವಿದ್ಯುತ್ ದರಗಳನ್ನು ಹೆಚ್ಚಿಸುವ ಸರ್ಕಾರದ ತೀರ್ಮಾನವನ್ನು ನರಸಾಪುರ ಇಂಡಸ್ಟ್ರಿಯಲ್ ಅಸೋಸಿಯೇಷನ್ ಅಧ್ಯಕ್ಷ ಶಿವಕುಮಾರ ಪಾಟೀಲ ವಿರೋಧಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ನರಸಾಪುರ ಇಂಡಸ್ಟ್ರಿಯಲ್ ಅಸೋಸಿಯೇಷನ್ ಪ್ರದೇಶದಲ್ಲಿ ಹೆಚ್ಚು ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕೆಗಳೇ ಇದ್ದು, ಈಗಾಗಲೇ ಕೋವಿಡ್-19ರಿಂದ ನಲುಗಿರುವ ಕೈಗಾರಿಕೆಗಳಿಗೆ ವಿದ್ಯುತ್ ದರ ಹೆಚ್ಚಳವು ಬಿಸಿತುಪ್ಪವಾಗಿ ಪರಿಣಮಿಸಲಿದೆ. ಇದರಿಂದ ಕೈಗಾರಿಕೋದ್ಯಮಿಗಳು ಸಂಕಷ್ಟಕ್ಕೆ ಸಿಲುಕುವಂತಾಗುತ್ತದೆ. ದುಬಾರಿ ವಿದ್ಯುತ್ ಬಿಲ್ಲನ್ನು ಪಾವತಿಸುವ ಶಕ್ತಿ ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕೆಗಳಿಗೆ ಇಲ್ಲ. ಈ ಕ್ರಮವು ಗ್ರಾಹಕರ ಮೇಲೆ ಹೆಚ್ಚುವರಿ ಆರ್ಥಿಕ ಬಾಧೆಯನ್ನು ಹಾಕುತ್ತದೆ.



ಈಗ, ಮುಂದಿನ ಮೂರು ವರ್ಷಗಳ ಅವಧಿಯಲ್ಲಿ ರೂ.4,659 ಕೋಟಿ ಹಿಂಬಾಕಿ ಮೊತ್ತವೂ ಸೇರಿದಂತೆ ರೂ.8,519 ಕೋಟಿಯನ್ನು ಗ್ರಾಹಕರಿಂದ ವಸೂಲಿ ಮಾಡಲು ಉದ್ದೇಶಿಸಲಾಗಿದೆ. ಏಪ್ರಿಲ್ 1ರ ನಂತರ ನೀಡಲಾಗುವ ವಿದ್ಯುತ್ ಬಿಲ್‌ಗಳಲ್ಲಿ ಪ್ರತಿ ಯೂನಿಟ್ ವಿದ್ಯುತ್ ಮೇಲೆ ರೂ.36 ಪೈಸೆಯನ್ನು ಹೆಚ್ಚುವರಿಯಾಗಿ ವಸೂಲಿ ಮಾಡಲಾಗುತ್ತದೆ.

ಕೆಪಿಟಿಸಿಎಲ್ ಮತ್ತು ಹೆಸ್ಕಾಂಗಳು ಸ್ವತಂತ್ರ ಕಂಪನಿಗಳೆಂದು ಬಿಂಬಿಸಿ, ಅವುಗಳ ನೌಕರರ ಪಿಂಚಣಿ ಮತ್ತು ಗ್ರಾಚ್ಯುಟಿಗೆ ಸರ್ಕಾರ ಭರಿಸಬೇಕಿದ್ದ ಮೊತ್ತವನ್ನು ಗ್ರಾಹಕರಿಗೆ ವರ್ಗಾಯಿಸುವ ರಾಜ್ಯ ಸರ್ಕಾರದ ನಡೆ ಜನವಿರೋಧಿಯಾಗಿದೆ.

ವಿದ್ಯುತ್ ನೌಕರರ ಪಿಂಚಣಿ, ಗ್ರಾಚ್ಯುಟಿಯ ಪಾಲು ತುಂಬುವುದಕ್ಕೆ ಪರ್ಯಾಯ ವ್ಯವಸ್ಥೆಯತ್ತ ಗಮನಹರಿಸಬೇಕು. ಕೆಪಿಟಿಸಿಎಲ್ ಮತ್ತು ಹೆಸ್ಕಾಂಗಳ ನೌಕರರನ್ನು ಸರ್ಕಾರಿ ನೌಕರರೆಂದೇ ಪರಿಗಣಿಸಲಾಗಿದೆ. ಹೀಗಿರುವಾಗ ಆ ನೌಕರರ ಪಿಂಚಣಿ, ಗ್ರಾಚ್ಯುಟಿಯಂತಹ ಸೌಲಭ್ಯಗಳಿಗೆ ಅಗತ್ಯ ಆರ್ಥಿಕ ಸಂಪನ್ಮೂಲ ಒದಗಿಸುವುದು ಸರ್ಕಾರದ ಹೊಣೆಗಾರಿಕೆ. ಉದ್ಯೋಗದಾತ ಮತ್ತು ಉದ್ಯೋಗಿಗಳಿಗೆ ಸಂಬಂಧಪಟ್ಟ ವಿಷಯದಲ್ಲಿ ಗ್ರಾಹಕರನ್ನು ಮಧ್ಯೆ ತರುವುದು ಸರಿಯಲ್ಲ. ಈ ನಿರ್ಧಾರವನ್ನು ಕೈಗಾರಿಕೋದ್ಯಮಿಗಳ ಹಿತದೃಷ್ಟಿಯಿಂದ ಸರ್ಕಾರ ತಕ್ಷಣ ಹಿಂಪಡೆಯಬೇಕೆಂದು ಅವರು ಸರ್ಕಾರವನ್ನು ಆಗ್ರಹಿಸಿದ್ದಾರೆ.

# ನರೇಗಲ್ಲದಲ್ಲಿಲ್ಲ 'ಕರ್ನಾಟಕ ಬಂದ್'



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕೆಎಸ್‌ಆರ್‌ಟಿಸಿ ಚಾಲಕನ ಮೇಲೆ ಎಂಇಎಸ್ ಪುಂಡರು ನಡೆಸಿದ್ದ ಪುಂಡಾಟಿಕೆಯನ್ನು ವಿರೋಧಿಸಿ ವಿವಿಧ ಕನ್ನಡಪರ ಸಂಘಟನೆಗಳು ಶನಿವಾರ ಕರೆದಿದ್ದ ಕರ್ನಾಟಕ ಬಂದ್‌ಗೆ ನರೇಗಲ್ಲ ಹೋಬಳಿಯಲ್ಲಿ ನೀರಸ ಪ್ರತಿಕ್ರಿಯೆ ವ್ಯಕ್ತವಾಗಿತ್ತು.

ಬೆಳಿಗ್ಗೆ ಜನಜೀವನ ಮಾಮೂಲಾಗಿತ್ತು.

ಎಂದಿನಂತೆ ಅಂಗಡಿ ಮುಂಗಟ್ಟುಗಳು ತೆರೆದಿದ್ದವು. ಬಸ್ ನಿಲ್ದಾಣದಲ್ಲಿ ಪ್ರಯಾಣಿಕರ ಸಂಖ್ಯೆ ಎಂದಿನಂತೆ ಇತ್ತು. ಸಾರಿಗೆ ಬಸ್‌ಗಳ ಸಂಚಾರದಲ್ಲಿ ಯಾವ ವ್ಯತ್ಯಯವೂ ಇಲ್ಲದ್ದರಿಂದ ಜನಜೀವನಕ್ಕೆ ಯಾವ ತೊಂದರೆಯೂ ಇರಲಿಲ್ಲ.

ಬಂದ್‌ಗೆ ನರೇಗಲ್ಲದಲ್ಲಿನ ಯಾವ ಸಂಘಟನೆಗಳೂ ಬೆಂಬಲ ವ್ಯಕ್ತಪಡಿಸಿರಲಿಲ್ಲ. ಈ ಕುರಿತು ಪತ್ರಿಕೆಯೊಂದಿಗೆ ಮಾತನಾಡಿದ ನಾರಾಯಣಗೌಡ ಬಣದ ಕರವೇ ಜಿಲ್ಲಾಧ್ಯಕ್ಷ ಹನುಮಂತ ಅಬ್ಬಿಗೇರಿ, ನಮ್ಮ ಬಣದಿಂದ ಮುಖ್ಯವಾಗಿ ಎರಡು ಬೇಡಿಕೆಗಳಿದ್ದವು. ಪುಂಡಾಡಿಕೆ ನಡೆಸಿದ ಪುಂಡರನ್ನು ಬಂಧಿಸಬೇಕು ಮತ್ತು ಮರಾಠಿಗರು ಹಾಕಿದ್ದ ಪೋಕ್ಸೋ ಕೇಸ್‌ನ್ನು ಹಿಂಪಡೆಯಬೇಕೆಂಬುದಾಗಿತ್ತು. ಬೆಳಗಾವಿಯ ಪೊಲೀಸ್ ಕಮಿಷನರ್ ಈ ಎರಡೂ ಬೇಡಿಕೆಗಳಿಗೆ ಸಕಾರಾತ್ಮಕವಾಗಿ ಸ್ಪಂದಿಸಿ ಕಾರ್ಯ ನಿರ್ವಹಿಸಿದ್ದರಿಂದ ನಮ್ಮ ರಾಜ್ಯಾಧ್ಯಕ್ಷರಾದ ಟಿ.ಎ. ನಾರಾಯಣಗೌಡರು ಈ ಬಂದ್‌ಗೆ ಬೆಂಬಲ ನೀಡಿರಲಿಲ್ಲ. ಅದೂ ಅಲ್ಲದೆ ಈಗ ಪರೀಕ್ಷೆಗಳ ಕಾಲವಿದ್ದು, ಬಂದ್ ನಡೆಸಿದರೆ ವಿದ್ಯಾರ್ಥಿಗಳ ಜೀವನಕ್ಕೆ ತೊಂದರೆಯಾಗುತ್ತದೆ ಎಂದು ನಮ್ಮ ಬಣ ಬಂದ್‌ಗೆ ಕರೆ ನೀಡಿರಲಿಲ್ಲ ಎಂದರು.

### ಕೋಚಲಾಪುರದಲ್ಲಿ ಶ್ರೀ ಧ.ಗ್ರಾ ಯೋಜನೆಯಿಂದ ನಿರ್ಗತಿಕಳಿಗೆ ವಾತ್ಸಲ್ಯ ಮನೆ ಹಸ್ತಾಂತರ

# ಸಂಸ್ಥೆಯಿಂದ ಸ್ವಾವಲಂಬಿ ಬದುಕಿಗೆ ಮುನ್ನುಡಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ಕೋಚಲಾಪುರ ಗ್ರಾಮದಲ್ಲಿ ನಿರ್ಗತಿಕಳಾದ ಲಕ್ಷ್ಮವ್ವ ಮುಂಡರಗಿಯವರಿಗೆ ಶ್ರೀ ಕ್ಷೇತ್ರ ಗ್ರಾಮೀಣಾಭಿವೃದ್ಧಿ ಯೋಜನೆಯ ಜ್ಞಾನ ವಿಕಾಸ ಕಾರ್ಯಕ್ರಮದಡಿಯಲ್ಲಿ ವಾತ್ಸಲ್ಯ ಮನೆಯನ್ನು ಹಸ್ತಾಂತರಿಸುವ ಕಾರ್ಯಕ್ರಮ ಜರುಗಿತು.

ನರೇಗಲ್ಲ ಹಿರೇಮಠದ ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮೀಜಿ ದಿವ್ಯ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿ, ಶ್ರೀ ಕ್ಷೇತ್ರ ಧರ್ಮಸ್ಥಳದ ಧರ್ಮಾಧಿಕಾರಿ ಡಾ. ವೀರೇಂದ್ರ ಹೆಗ್ಗಡೆ ಮತ್ತು ಅವರ ಧರ್ಮಪತ್ನಿ ಡಾ.ಹೇಮಾವತಿ ಹೆಗ್ಗಡೆಯವರು ಎಂದಿಗೂ ಭಕ್ತರ ಅಭಿವೃದ್ಧಿಗಾಗಿ ಉತ್ತಮ ಕಾರ್ಯಗಳನ್ನು ಮಾಡುತ್ತ ಬಂದಿದ್ದಾರೆ. ಗ್ರಾಮೀಣಾಭಿವೃದ್ಧಿ ಸಂಸ್ಥೆಯನ್ನು ಸ್ಥಾಪಿಸುವ ಮೂಲಕ ಅವರು ಮಹಿಳೆಯರ ಸ್ವಾವಲಂಬಿ ಬದುಕಿಗೆ ಮುನ್ನುಡಿಯನ್ನು



ಬರೆದಿದ್ದಾರೆ. ಇದರೊಂದಿಗೆ ನಿರ್ಗತಿಕರಿಗೆ ಮನೆ ಕಟ್ಟಿಕೊಡುವ ಅವರ ಯೋಜನೆ ಶ್ರೇಷ್ಠವಾದ ಸಾಮಾಜಿಕ ಕಾರ್ಯವಾಗಿದೆ ಎಂದರು.

ಜಿಲ್ಲಾ ಯೋಜನಾಧಿಕಾರಿ ಯೋಗೇಶ ಎ ಮಾತನಾಡಿ, ಸಂಸ್ಥೆಯ ವತಿಯಿಂದ ನಿರ್ಗಕತಿಕರಿಗೆ ಪ್ರತಿ ತಿಂಗಳೂ 1000ರೂ.ಗಳ ಮಾಸಾಶನ ನೀಡಲಾಗುತ್ತಿದೆ. ರೋಣ ತಾಲೂಕಿನಲ್ಲಿ 97 ಜನ ಈ ಮಾಸಾಶನ ಪಡೆಯುತ್ತಿದ್ದಾರೆ.

ನಿವೃತ್ತ ಶಿಕ್ಷಕ ಎಂ.ಎಸ್. ದಢೇಸೂರಮಠ ಮಾತನಾಡಿ, ಒಳ್ಳೆಯ ಕಾರ್ಯ ಮಾಡಲು ಪುಣ್ಯ ವಿಶೇಷ ಬೇಕಾಗುತ್ತದೆ. ಈ ಸಂಸ್ಥೆಯು ಅಂತಹ ವಿಶೇಷತೆಯನ್ನು ಹೊಂದಿದ್ದು, ಇಂದು ಅರ್ಹರಿಗೆ ವಾತ್ಸಲ್ಯ ಮನೆಯನ್ನು ಹಸ್ತಾಂತರಿಸುತ್ತಿದೆ. ಮಹಿಳೆಯರನ್ನು ಸ್ವಾವಲಂಬಿಯನ್ನಾಗಿಸುವದರಲ್ಲಿ ಈ ಸಂಸ್ಥೆಯ ಪಾತ್ರ ಮಹತ್ವದ್ದು ಎಂದರು.

ನಿರ್ಗತಿಕರಿಗೆ 10*10 ಅಳತೆಯಲ್ಲಿ ಮನೆ ನಿರ್ಮಿಸಿಕೊಡಲಾಗುತ್ತಿದೆ. ಈ ಮನೆಗೆ ಒಟ್ಟು 1.14ಲ ರೂ. ಖರ್ಚಾಗಿದೆ. ರೋಣ ತಾಲೂಕಿನಲ್ಲಿ ಇಂತಹ 7 ಮನೆಗಳನ್ನು ನಿರ್ಮಿಸಿದ್ದು, ರಾಜ್ಯದಲ್ಲಿ 389 ಮನೆಗಳನ್ನು ಸಂಸ್ಥೆಯಿಂದ ನಿರ್ಮಿಸಲಾಗಿದೆ. 150 ಮನೆಗಳನ್ನು ದುರಸ್ತಿ ಮಾಡಲಾಗಿದೆ. ರಾಜ್ಯದಲ್ಲಿ 31325 ವಿಶೇಷ ಚೇತನರಿಗೆ ಒಟ್ಟು 8 ಕೋಟಿ ರೂ.ಗಳ ಸಹಾಯ ಧನವನ್ನು ನೀಡಲಾಗಿದ್ದು, ಅದರಲ್ಲಿ ರೋಣ ತಾಲೂಕಿನಲ್ಲಿ 85 ಜನರು ಈ ಸೌಲಭ್ಯವನ್ನು ಪಡೆಯುತ್ತಿದ್ದಾರೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಪ.ಪಂ. ಸದಸ್ಯ ರಾಚಯ್ಯ ಮಾಲಗಿತ್ತಿಮಠ ಮಾತನಾಡಿ, ಇಂದು ಹಸ್ತಾಂತರಿಸಲಾದ ಮನೆಗೆ ಬೇಕಾದ ವಿದ್ಯುತ್ ಮತ್ತು ನೀರಿನ ವ್ಯವಸ್ಥೆಯನ್ನು ಪ.ಪಂ ವತಿಯಿಂದ ಬೇಗನೆ ಒದಗಿಸಿಕೊಡುವುದಾಗಿ ಹೇಳಿದರು. ಕಾರ್ಯಕ್ರಮದಲ್ಲಿ ಶರಣಪ್ಪಗೌಡ ಅಯ್ಯನಗೌಡ್ರ, ಯೋಜನಾಧಿಕಾರಿ ಸುಧಾ ಗಾಂವಕರ ಮತ್ತು ಗ್ರಾಮದ ಮುಖಂಡರು ಪಾಲ್ಗೊಂಡಿದ್ದರು. ತಾಲೂಕಾ ಯೋಜನಾಧಿಕಾರಿ ಮಹಾಬಲೇಶ್ವರ ಪಟಗಾರ ನಿರೂಪಿಸಿ ಸ್ವಾಗತಿಸಿದರು. ಕಾರ್ಯಕರ್ತೆ ಅಶ್ವಿನಿ ವಂದಿಸಿದರು.

# ಯುಎಇಯಲ್ಲಿ 25 ಭಾರತೀಯರಿಗೆ ಮರಣದಂಡನೆ ಪ್ರಕಟ

■ವಿಜಯಸಾಕ್ಷಿ ಸುದ್ದಿ, ಮಿಯಾಮಿ

ಯುಎಇಯಲ್ಲಿ ಮರಣದಂಡನೆ ಪ್ರಕಟಗೊಂಡಿರುವ ಭಾರತೀಯ ಪ್ರಜೆಗಳ ಸಂಖ್ಯೆ 25 ಆಗಿದ್ದು, ಇನ್ನಷ್ಟೇ ಶಿಕ್ಷೆ ಜಾರಿಯಾಗಬೇಕಿದೆ ಎಂದು ಕೇಂದ್ರ ಸರ್ಕಾರ ಗುರುವಾರ (ಮಾ.20) ಸಂಸತ್ತಿಗೆ ತಿಳಿಸಿದೆ.

ವಿದೇಶಾಂಗ ವ್ಯವಹಾರಗಳ ರಾಜ್ಯ ಸಚಿವ ಕೀರ್ತಿ ವರ್ಧನ್ ಸಿಂಗ್ ಅವರು ರಾಜ್ಯಸಭೆಯಲ್ಲಿ ಲಿಖಿತ ಪ್ರಶ್ನೆಗೆ ನೀಡಿದ ಉತ್ತರದಲ್ಲಿ ಈ ಮಾಹಿತಿಯನ್ನು ನೀಡಿದ್ದಾರೆ.

"ಸಚಿವಾಲಯದಲ್ಲಿ ಲಭ್ಯವಿರುವ ಮಾಹಿತಿಯ ಪ್ರಕಾರ, ವಿದೇಶಿ ಕಾರಾಗೃಹಗಳಲ್ಲಿ ಪ್ರಸ್ತುತ ವಿಚಾರಣಾಧೀನ ಕೈದಿಗಳು ಸೇರಿದಂತೆ ಭಾರತೀಯ ಕೈದಿಗಳ ಸಂಖ್ಯೆ 10,152" ಎಂದು ಸಿಂಗ್ ಹೇಳಿದ್ದಾರೆ.

ವಿದೇಶಗಳಲ್ಲಿ ಮರಣದಂಡನೆಗೆ ಗುರಿಯಾಗಿರುವ ಭಾರತೀಯರ ವಿವರಗಳು ಮತ್ತು ಅವರಿಗೆ ಸಹಾಯ ಮಾಡಲು ಭಾರತ ಸರ್ಕಾರ ಮಾಡಿದ ಪ್ರಯತ್ನಗಳ ಬಗ್ಗೆಯೂ ಪ್ರಶ್ನೆಯಲ್ಲಿ ಕೇಳಲಾಗಿತ್ತು.

"ವಿದೇಶಿ ಜೈಲುಗಳಲ್ಲಿರುವವರು ಸೇರಿದಂತೆ ವಿದೇಶಗಳಲ್ಲಿರುವ ಭಾರತೀಯ ಪ್ರಜೆಗಳ ಸುರಕ್ಷತೆ, ಭದ್ರತೆ ಮತ್ತು ಯೋಗಕ್ಷೇಮಕ್ಕೆ ಸರ್ಕಾರ ಹೆಚ್ಚಿನ ಆದ್ಯತೆ ನೀಡುತ್ತಿದೆ" ಎಂದು ಸಿಂಗ್ ತಿಳಿಸಿದ್ದಾರೆ.

ಭಾರತೀಯರಿಗೆ ಮರಣದಂಡನೆ ಶಿಕ್ಷೆ ಘೋಷಣೆಯಾಗಿರುವ, ಇನ್ನೂ ಜಾರಿಯಾಗದ ಎಂಟು ದೇಶಗಳ ಡೇಟಾವನ್ನು ಸಚಿವರು ಹಂಚಿಕೊಂಡಿದ್ದಾರೆ. ಅಂಕಿ ಅಂಶಗಳ ಪ್ರಕಾರ, ಯುಎಇಯಲ್ಲಿ 25, ಸೌದಿ ಅರೇಬಿಯಾದಲ್ಲಿ 11, ಮಲೇಷ್ಯಾದಲ್ಲಿ 6, ಕುವೈತ್‌ನಲ್ಲಿ 3 ಮತ್ತು ಇಂಡೋನೇಷ್ಯಾ, ಕತಾರ್, ಅಮೆರಿಕ ಮತ್ತು ಯೆಮೆನ್‌ನಲ್ಲಿ ತಲಾ ಒಬ್ಬರಿಗೆ ಮರಣದಂಡನೆ ವಿಧಿಸಲಾಗಿದೆ.

"ವಿದೇಶಿ ನ್ಯಾಯಾಲಯಗಳಿಂದ ಮರಣದಂಡನೆ ಸೇರಿದಂತೆ ಶಿಕ್ಷೆಗೊಳಗಾದ ಭಾರತೀಯ ಪ್ರಜೆಗಳಿಗೆ ವಿದೇಶದಲ್ಲಿರುವ ಭಾರತೀಯ ರಾಯಭಾರ ಕಚೇರಿಗಳು/ಠಾಣೆಗಳು ಸಾಧ್ಯವಿರುವ ಎಲ್ಲ ಸಹಾಯವನ್ನು ಒದಗಿಸುತ್ತಿವೆ. ಭಾರತೀಯ ರಾಯಭಾರ ಕಚೇರಿಗಳು/ಠಾಣೆಗಳು ಜೈಲುಗಳಿಗೆ ಭೇಟಿ ನೀಡುವ ಮೂಲಕ ಮತ್ತು ನ್ಯಾಯಾಲಯಗಳು, ಜೈಲುಗಳು, ಪಬ್ಲಿಕ್ ಪ್ರಾಸಿಕ್ಯೂಟರ್‌ಗಳು ಮತ್ತು ಇತರ ಸಂಬಂಧಿತ ಸಂಸ್ಥೆಗಳೊಂದಿಗೆ ಅವರ ಪ್ರಕರಣಗಳನ್ನು ಫಾಲೋ ಅಪ್ ಮಾಡುವ ಮೂಲಕ ಕಾನ್ಸುಲರ್ ಪ್ರವೇಶವನ್ನು ಒದಗಿಸುತ್ತಿವೆ.

ಜೈಲಿನಲ್ಲಿರುವ ಭಾರತೀಯ ಪ್ರಜೆಗಳಿಗೆ ಮೇಲ್ಮನವಿ ಸಲ್ಲಿಸುವುದು, ಕ್ಷಮಾದಾನ ಅರ್ಜಿ ಸಲ್ಲಿಸುವುದು ಸೇರಿದಂತೆ ವಿವಿಧ ಕಾನೂನು ಪರಿಹಾರಗಳನ್ನು ಅನ್ವೇಷಿಸುವಲ್ಲಿ ಸಹಾಯ ಮಾಡಲಾಗುತ್ತಿದೆ" ಎಂದು ಸಚಿವರು ವಿವರಿಸಿದ್ದಾರೆ.

### ಪ್ರತಿಭಟನಾ ನಿರತ ಮಹಿಳೆಗೆ ಬಿಜೆಪಿ ನಾಯಕ ಬೆದರಿಕೆ!

# ಕಿರಚಬೇಡಿ, ನಿಮ್ಮ ಕತ್ತು ಹಿಸುಕುತ್ತೇನೆ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಶುಕ್ರವಾರ ನಡೆದ ಸಾರ್ವಜನಿಕ ಕಾರ್ಯಕ್ರಮವೊಂದರಲ್ಲಿ ಮಹಿಳಾ ಪ್ರತಿಭಟನಾಕಾರರೊಬ್ಬರಿಗೆ ಪಶ್ಚಿಮ ಬಂಗಾಳದ ಬಿಜೆಪಿ ಹಿರಿಯ ನಾಯಕ ದಿಲೀಪ್ ಘೋಷ್ ಬೆದರಿಕೆ ಹಾಕುತ್ತಿರುವ ವಿಡಿಯೊ ವೈರಲ್ ಆಗಿದ್ದು, ವ್ಯಾಪಕ ಟೀಕೆಗೆ ಗುರಿಯಾಗಿದೆ. ಮಾಜಿ ಸಂಸದರಾಗಿರುವ ದಿಲೀಪ್ ಅವರು ರಾಜ್ಯದ ಖರಗ್‌ಪುರದ ವಾರ್ಡ್ 6 ರಲ್ಲಿ ಹೊಸದಾಗಿ ನಿರ್ಮಿಸಲಾದ ರಸ್ತೆಯನ್ನು ಉದ್ಘಾಟಿಸಲು ಹೋದಾಗ ಈ ಘಟನೆ ಸಂಭವಿಸಿದೆ. ಪಶ್ಚಿಮ ಬಂಗಾಳ

ಸಂಸತ್ ಸದಸ್ಯರಾಗಿದ್ದಾಗ ಅವರ ಅನುಪಸ್ಥಿತಿಯನ್ನು ಪ್ರಶ್ನಿಸಿ ಸ್ಥಳೀಯ ಮಹಿಳೆಯರು ಘೋಷ್ ಅವರನ್ನು ಘೇರಾವ್ ಹಾಕಿದಾಗ ಪ್ರದೇಶದಲ್ಲಿ ಪರಿಸ್ಥಿತಿ ಉಲ್ಬಣಗೊಂಡಿತು. ಪ್ರಸ್ತುತ ರಸ್ತೆಯನ್ನು ತೃಣಮೂಲ ಕಾಂಗ್ರೆಸ್ ಕೌನ್ಸಿಲರ್ ಪ್ರದೀಪ್ ಸರ್ಕಾರ್ ನಿರ್ಮಿಸಿದ್ದಾರೆ ಎಂದು ಮಹಿಳೆ ಹೇಳಿದ್ದರು. ಪಶ್ಚಿಮ ಬಂಗಾಳ

"ನೀವು ಇಷ್ಟು ದಿನ ಎಲ್ಲಿದ್ದೀರಿ? ನೀವು ಸಂಸದರಾಗಿದ್ದಾಗ ನಾವು ನಿಮ್ಮನ್ನು ಒಂದು ದಿನವೂ ನೋಡಿರಲಿಲ್ಲ. ಈಗ, ನಮ್ಮ ಕೌನ್ಸಿಲರ್ ರಸ್ತೆ ನಿರ್ಮಿಸಿದ ನಂತರ, ನೀವು ಇಲ್ಲಿಗೆ ಬಂದಿದ್ದೀರಾ?" ಎಂದು ಮಹಿಳೆಯೊಬ್ಬರು ಹೇಳಿರುವುದಾಗಿ ಎನ್‌ಡಿಟಿವಿ ಉಲ್ಲೇಖಿಸಿದೆ.

ಈ ವೇಳೆ ದಿಲೀಪ್ ಘೋಷ್ ಆಕ್ರಮಣಕಾರಿಯಾಗಿ ಪ್ರತಿಕ್ರಿಯಿಸಿ ಪ್ರತಿಭಟನಾಕಾರರನ್ನು ತೃಣಮೂಲ ಬೆಂಬಲಿಗರು ಎಂದು ಕರೆದಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka